MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್ Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ Cell : 9743496111

ಸಂಪುಟ: 04 | ಸಂಚಿಕೆ: 296 | ಗುರುವಾರ : 11-09-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 04 | ISSUE: 296 | THURSDAY : 11-09-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ಓಪೆಕ್ ಆಸ್ಪತ್ರೆಗೆ ನ್ಯಾ.ಹೆಚ್.ಎ.ಸಾತ್ವಿಕ್ ದಿಢೀರ್ ಭೇಟಿ; ಪರಿಶೀಲನೆ



ಯುವ ಮಾರ್ಗ ಸುದ್ದಿ

**ರಾಯಚೂರು,ಸೆ.10–**ನಗರದ ರಾಜೀವಗಾಂಧಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗೆ (ಓಪೆಕ್) ಗೌರವಾನ್ವಿತ ಹಿರಿಯ ಶ್ರೇಣಿಯ ದಿವಾಣಿ ನ್ಯಾಯಾಧೀಶರು ಆಗಿರುವ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಹೆಚ್.ಎ.ಸಾತ್ವಿಕ್ ಅವರು ಬುಧವಾರ ದಿಢೀರ್ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಮಧ್ಯಾಹ್ನ 12.45ರ ಸುಮಾರಿಗೆ ಆಸ್ಪತ್ರೆಗೆ ಪ್ರವೇಶಿಸಿದ ನ್ಯಾಯಾಧೀಶರು, ಆಸ್ಪತ್ರೆಯಲ್ಲಿನ ರೋಗಿಗಳು ಮತ್ತು ಅವರ ಕುಟುಂಬದವರ ಜೊತೆ ಮಾತನಾಡಿ ಆಸ್ಪತ್ರೆಯಲ್ಲಿನ ವೈದ್ಯಕೀಯ ಸೌಕರ್ಯಗಳ ಬಗ್ಗೆ ಪರಿಶೀಲಿಸಿದರು. ಆಸ್ಪತ್ರೆಯ ಪ್ರವೇಶದ ವೇಳೆ, ಆಸ್ಪತ್ರೆಯ ಹೊರಾಂಗಣದಲ್ಲಿ ಕುಳಿತಿದ್ದ ರೋಗಿಯೊಬ್ಬರನ್ನು ನ್ಯಾಯಾಧೀಶರು ಮಾತನಾಡಿಸಿದರು. ಆಸ್ಪತ್ರೆಯ ಬಾಗಿಲು ಬಳಿ ಮಲಗಿದ್ದ ಮಹಿಳಾ ರೋಗಿಯೊಬ್ಬರಿಗೆ ವಿಚಾರಿಸಿದಾಗ, ವೈದ್ಯರಿಗಾಗಿ ಕಾಯುತ್ತಿರುವುದು ತಿಳಿಯಿತು. ಈ **(2ನೇಪುಟಕ್ಕೆ)**

## ಸರ್ಕಾರಿ ವೈದ್ಯಕೀಯ ಕಾಲೇಜುಗಳ ಎನ್‌ಆರ್‌ಐ ಕೋಟಾ ರದ್ದುಪಡಿಸಲು ಅಗ್ರಹಿಸಿ ಬೃಹತ್ ಪ್ರತಿಭಟನೆ




**ಕಲಬುರಗಿ,ಸೆ.10–** ಎಐಡಿಎಸ್‌ಓ ಸಂಘಟನೆ ನೇತೃತ್ವದಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜುಗಳ ಎನ್.ಆರ್.ಐ ಕೋಟಾ ರದ್ದುಪಡಿಸಲು ಅಗ್ರಹಿಸಿ ನಗರದ ಎಸ್ ವಿ ಪಿ ವೃತ್ತ ದಿಂದ ಜಿಲ್ಲಾಧಿಕಾರಿ ಕಚೇರಿಯ ವರೆಗೆ ಬೃಹತ್ ಪ್ರತಿಭಟನಾ ಮೆರವಣಿಗೆ ನಡೆಸಲಾಯಿತು.

ಜಿಲ್ಲಾಧಿಕಾರಿ ಕಚೇರಿ ಎದುರುಗಡೆ ಪ್ರತಿಭಟನೆಯನ್ನು ಉದ್ದೇಶಿಸಿ ಎಐಡಿಎಸ್‌ಓ ಜಿಲ್ಲಾ ಕಾರ್ಯದರ್ಶಿ ತುಳಜರಾಮ ಎನ್.ಕೆ ಅವರು, ಮಾತನಾಡಿ ಇದೇ 2025–26ನೇ ಸಾಲಿನಿಂದ ರಾಜ್ಯದ ಸರ್ಕಾರಿ ವೈದ್ಯಕೀಯ ಕಾಲೇಜುಗಳಲ್ಲಿ 15% ಎನ್.ಆರ್.ಐ ಕೋಟಾವನ್ನು ಆರಂಭಿಸುವ ಕರ್ನಾಟಕ ರಾಜ್ಯ ಸರ್ಕಾರದ **(2ನೇಪುಟಕ್ಕೆ)**

## ಎರಡು ವರ್ಷ ಶಾಸಕರಾಗಿ ಮಾಡಿದ ಕೆಲಸ ತೃಪ್ತಿ ತಂದಿದೆ: ಕರೆಮ್ಮ



ಯುವ ಮಾರ್ಗ ಸುದ್ದಿ

**ದೇವದುರ್ಗ,ಸೆ.10–** ಹಿಂದುಳಿದ ದೇವದುರ್ಗ ತಾಲೂಕಿನ ಸಮಗ್ರ ಅಭಿವೃದ್ಧಿಗಾಗಿ ನಾನು ಪಣತೊಟ್ಟಿದ್ದು ಇದಕ್ಕಾಗಿ ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿಯಿಂದ ವಿಶೇಷ ಅನುದಾನ ತರಲು ಶ್ರಮಿಸಿದ್ದೇನೆ. ಈಗ ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿಯಿಂದ ಮೂರನೇ ಹಂತದಲ್ಲಿ 36 ಕೋಟಿ ಅನುದಾನ ತರಲಾಗಿದೆ ಎಂದು ಶಾಸಕಿ ಕರೆಮ್ಮ ಜಿ ನಾಯಕ ಹೇಳಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಬುಧವಾರ ಮಾತನಾಡಿದರು. ನಾನು ಶಾಸಕರಾಗಿ ಆಯ್ಕೆಯಾಗಿ ಎರಡು ವರ್ಷ ಕಳೆದಿದ್ದು ಈ ಅವಧಿಯಲ್ಲಿ ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಶಕ್ತಿಮೀರಿ ಕೆಲಸ ಮಾಡಿದ್ದೇನೆ. ಸುಮಾರು ಒಂದು ಸಾವಿರ ಕೋಟಿ ಅನುದಾನ ತಂದು ಜನರಿಗೆ ಅನುಕೂಲ ಕಲ್ಪಿಸಿದ್ದೇನೆ. ನನ್ನ ಈ ಎರಡು ವರ್ಷ ಅವಧಿಯಲ್ಲಿ ಕೈಗೊಂಡ ಕಾಮಗಾರಿಗಳಿಂದ ಹಾಗೂ **(2ನೇಪುಟಕ್ಕೆ)**

## ಸಹಾಯಕ ಆಯುಕ್ತರ ನೇತೃತ್ವದಲ್ಲಿ 11 ಖಾಸಗಿ ಆಸ್ಪತ್ರೆಗಳ ಮೇಲೆ ದಿಢೀರ್ ದಾಳಿ, ಪರಿಶೀಲನೆ




ಯುವ ಮಾರ್ಗ ಸುದ್ದಿ

**ರಾಯಚೂರು,ಸೆ.10–**ರಾಯಚೂರಿನ ಎಲ್‌ಬಿಎಸ್ ನಗರ ಸೇರಿದಂತೆ ಇತರೆಡೆ ಇರುವ ಖಾಸಗಿ ಆಸ್ಪತ್ರೆಗಳ ಮೇಲೆ, ರಾಯಚೂರು ಸಹಾಯಕ ಆಯುಕ್ತರಾದ ಗಜಾನನ ಬಾಳೆ ಅವರ ನೇತೃತ್ವದಲ್ಲಿ ಆರೋಗ್ಯ ಇಲಾಖೆಯ ಅಧಿಕಾರಿಗಳು ದಿಢೀರ್ ದಾಳಿ ನಡೆಸಿದರು.

ಈ ವೇಳೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ಸುರೇಶಬಾಬು ಅವರು ಮಾತನಾಡಿ, ಸೆಪ್ಟೆಂಬರ್ 10ರಂದು 11 **(2ನೇಪುಟಕ್ಕೆ)**

## ಹೈನುಗಾರಿಕೆಯಿಂದ ಆರ್ಥಿಕ ಅಭಿವೃದ್ಧಿ ಹೊಂದಿ : ಶಾಸಕ ಮಾನಪ್ಪ ವಜ್ಜಲ್



ಯುವ ಮಾರ್ಗ ಸುದ್ದಿ

**ಲಿಂಗಸುಗೂರು,ಸೆ.10–**ಕೇಂದ್ರ ಹಾಗೂ ರಾಜ್ಯ ಸರಕಾರದಿಂದ ಬರುವ ದೊರಕುವ ಸಾಲ ಸೌಲಭ್ಯಗಳನ್ನು ಬಳಸಿಕೊಂಡು ಮಹಿಳೆಯರು, ರೈತರು, ಹೈನುಗಾರಿಕೆಗೆ ಹೆಚ್ಚಿನ ಒತ್ತು ನೀಡುವ ಮೂಲಕ ಆರ್ಥಿಕವಾಗಿ ಅಭಿವೃದ್ದಿ ಹೊಂದಬೇಕೆಂದು ಶಾಸಕ ಮಾನಪ್ಪ ವಜ್ಜಲ್ ಸಲಹೆ ನೀಡಿದರು.

ಪಟ್ಟಣದ ತಾಲೂಕ ಪಂಚಾಯತ ಸಭಾಂಗಣದಲ್ಲಿ ನಡೆದ ತಾಲೂಕಿನ ಪ್ರತಿ ಹಳ್ಳಿಯಲ್ಲಿ ಹಾಲು ಉತ್ಪಾದಕರ ಸಹಕಾರ ಸಂಘಗಳನ್ನು ಸ್ಥಾಪಿಸುವ, ಆ ಗುರಿಸಾಧನೆಗಾಗಿ ಒಂದು ದಿನದ ಚಿಂತನ–ಮಂಥನ ಕಾರ್ಯಕ್ರಮ ಉದ್ಘಾಟನೆ ನೆರವೇರಿಸಿ ಮಾತನಾಡಿದ ಅವರು, ಸರಕಾರದಿಂದ ಸಿಗುವ ಸಬ್ಸಿಡಿಗಳನ್ನು ಬಳಸಿಕೊಂಡು, ಉತ್ತಮ ತಳಿಯ ರಾಸುಗಳನ್ನು ಸಾಕಾಣಿಕೆ ಮಾಡಿ ಅವುಗಳಿಗೆ ಗುಣಮಟ್ಟದ ಆಹಾರ ಒದಗಿಸಿ,ರೋಗಗಳು ಬರದಂತೆ ಲಸಿಕೆ ಹಾಕಿಸಿ,ಪ್ರತಿ ಲೀಟರ್ ಹಾಲಿನ ಬೆಲೆ 50 ರೂಪಾಯಿ ಆದರೆ ನಾವುಗಳು ಕನಿಷ್ಠ 30 ರೂಪಾಯಿಯಷ್ಟು ಹಸುಗೆ ವೆಚ್ಚ ಮಾಡಿ,ಸ್ವಾವಲಂಬನೆಯ ಜೀವನ ನಡೆಸಲು ಮುಂದಾಗಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ತಾ ಪಂ ಕಾರ್ಯನಿರ್ವಾಹಕ ಅಧಿಕಾರಿ ಉಮೇಶ ಪ್ರಸ್ತಾವಿಕ ಮಾತನಾಡಿದ ಅವರು,

ಲಿಂಗಸಗೂರು ತಾಲೂಕಿನಲ್ಲಿ ಹೈನುಗಾರಿಕೆಗೆ ಸಂಬಂಧಿಸಿದಂತೆ ಆಧುನಿಕ ತಂತ್ರಜ್ಞಾನ ಬಳಕೆ, ಪ್ರತಿ ಹಳ್ಳಿಯಲ್ಲಿ ಹಾಲು ಉತ್ಪಾದಕ ಸಂಘ ಸ್ಥಾಪಿಸಿ ಮುಂದಿನ ಎರಡು ತಿಂಗಳಲ್ಲಿ ಪ್ರತಿ ದಿನ 50 ಸಾವಿರ ಲೀಟರ್ ಹಾಲು ಉತ್ಪಾದನೆ ಗುರಿಯನ್ನು ಸಾಧಿಸುವ ಕುರಿತು ಅಧಿಕಾರಿಗಳಿಂದ ಮಾಹಿತಿ ನೀಡಲಾಯಿತು.

ತಾ ಪಂ ಸಹಾಯಕ ನಿರ್ದೇಶಕರು ಪಂಪನಗೌಡ ಪಾಟೀಲ್, ನಿರ್ದೇಶಕರು ಕೆಎಂಎಫ್ ಅಮರಗುಂಡಪ್ಪ ಹಳ್ಳಿ ಸ.ನಿರ್ದೇಶಕರು ಪಶುಪಾಲನಾ ಇಲಾಖೆ ಡಾ. ಅಮರೇಗೌಡ ಪಾಟೀಲ್, ಕೃಷಿ ವಿಸ್ತರಣಾ ಶಿಕ್ಷಣ ಕೇಂದ್ರ ಮುಖ್ಯಸ್ಥರು ವಾಣಿಶ್ರೀ, ಸಹಕಾರ ಸಂಘ ಉಪ ನಿರ್ದೇಶಕರು ಮಹೇಬೂಬ್ ತರಬೇತಿ ನೀಡಿದರು.

ಈ ಸಂಧರ್ಭದಲ್ಲಿ ಜಿಲ್ಲಾ ಸಹಕಾರಿ ಒಕ್ಕೂಟ ನಿರ್ದೇಶಕರು ಶಶಿಧರ ಪಾಟೀಲ್, ತಾಪಂ ಸಹಾಯಕ ನಿರ್ದೇಶಕರು ವೆಂಕಟೇಶ ದೇಸಾಯಿ, ತಾಲೂಕ ಯೋಜನಾ ಧಿಕಾರಿಗಳು ಮಹಿಬೂಬ ಸಾಬ್, ಜಿಲ್ಲಾ ವ್ಯವಸ್ಥಾಪಕರು ಎನ್‌ಆರ್‌ಎಲ್‌ಎಂ– ಶ್ರೀಕಾಂತ ಬನ್ನಿಗೋಳ, ಬಿಜೆಪಿ ಮಂಡಲ ಅಧ್ಯಕ್ಷ ಕೆ. ನಾಗಭೂಷಣ, ಗಿರಿಮಲ್ಲನಗೌಡ, ಅಯ್ಯಪ್ಪ ವಕೀಲರು, ಐಇಸಿ ಬಾಲಪ್ಪ, ಟಿಪಿಎಂ ಈರಪ್ಪ, ಬಿಎಂ ಮಲ್ಲಪ್ಪ, ಹೊನ್ನಮ್ಮ, ಮಂಜುನಾಥ ಹಾಗೂ ಕೆಎಂಎಫ್ ಮಂಜುನಾಥ ಸೇರಿದಂತೆ ಮಹಿಳೆಯರು, ರೈತರು ಇತರರಿದ್ದರು, ಕಾರ್ಯಕ್ರಮ ಸಿಎಸ್ ಬಸವರಾಜ ಕಟ್ಟಿಮನಿ ನಡೆಸಿಕೊಟ್ಟರು.

# ಹಾಲಭಾವಿಯಲ್ಲಿ ರೋಗಿಗಳ ನರಳಾಟ,ನಿದ್ರೆಗೆ ಜಾರಿದ ಅಧಿಕಾರಿಗಳು



ಯುವ ಮಾರ್ಗ ಸುದ್ದಿ

**ಲಿಂಗಸುಗೂರು,ಸೆ.10–** ತಾಲೂಕಿನ ಹಾಲಭಾವಿ ಗ್ರಾಮದಲ್ಲಿ ಕಳೆದ ಇಪ್ಪತ್ತು ದಿನಗಳಿಂದ 200 ಕ್ಕೂ ಹೆಚ್ಚು ಜನ ರೋಗಿಗಳು ಸ್ಥಳೀಯ ಈಚನಾಳ, ಆನೆಹೊಸುರು ಸರಕಾರಿ ಆಸ್ಪತ್ರೆ, ಹಾಗೂ ಲಿಂಗಸುಗೂರಿನ ಎಸ್ ಬಿ ಎಲ್,ಸಂಜೀವಿನಿ, ಸೇರಿದಂತೆ ವಿವಿಧ ಖಾಸಗಿ ಆಸ್ಪತ್ರೆಗಳಲ್ಲಿ ಚಿಕಿತ್ಸೆಗೆ ದಾಖಲಾಗುತ್ತಿದ್ದು, ಡೆಂಗ್ಯೂ ಪ್ರಕರಣಗಳು ಉಲ್ಬಣವಾಗುತ್ತಿದ್ದು, ಪ್ಲೇಟ್‌ಲೆಟ್‌ಗಳ ಸಂಖ್ಯೆ ಕಡಿಮೆ ಆಗುತ್ತಿರುವುದರಿಂದ ಆಸ್ಪತ್ರೆಗೆ ದಾಖಲಾಗುತ್ತಿರುವ ರೋಗಿಗಳ ಸಂಖ್ಯೆಯಲ್ಲೂ ಹೆಚ್ಚಳವಾಗುತ್ತಿದೆ. ಹೀಗಾಗಿ ಸ್ಥಳೀಯ ಆಸ್ಪತ್ರೆಯಲ್ಲಿ ಹಾಸಿಗೆಗಳ ಕೊರತೆ ಎದುರಾಗುತ್ತಿದ್ದು ಸ್ಥಳಕ್ಕೆ ತಹಶೀಲ್ದಾರ ಸತ್ಯಮ್ಮ ಭೇಟಿ ನೀಡಿ ಪರಿಶೀಲನೆ ನಡೆಸಿದರು.

**ಆ.25 ಕ್ಕೆ ಇಓ ಭೇಟಿ ಕ್ರಮವಿಲ್ಲ:** ತಾಲುಕಾ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಉಮೇಶ ಹಾಗೂ ಗೊರೆಬಾಳ ಗ್ರಾಮ ಪಂಚಾಯತ ಪಿಡಿಓ ಬಸವರಾಜ ರವರು ಆಗಸ್ಟ್ 25 ರಂದು ಭೇಟಿ ನೀಡಿ ಕಳೆದ ಹದಿನೈದು ದಿನಗಳ ಹಿಂದೆ ಹಾಲಭಾವಿ ಗ್ರಾಮಕ್ಕೆ ಭೇಟಿ ನೀಡಿ,ಶುದ್ದ ಕುಡಿಯುವ ನೀರಿನ ಘಟಕ ಸ್ಥಾಪನೆ ಮಾಡುವ ಭರವಸೆ ನೀಡಿದ್ದಾರೆ ಇಂದಿನವರೆಗೂ ಶುದ್ದ ನೀರು ಸಿಗುತ್ತಿಲ್ಲ.

**ಟಿಎಚ್‌ಓ ನಿರ್ಲಕ್ಷ:** ಕಳೆದ 20 ದಿನಗಳಿಂದ ಪ್ರತಿನಿತ್ಯ ಅನಾರೋಗ್ಯ ದಿಂದ ಜನರು ಬಳಲುತಿದ್ದರೂ ಈ ಬಗ್ಗೆ ತಾಲುಕಾ ಆರೋಗ್ಯಾಧಿಕಾರಿ ಅಮರೇಶ ಪಾಟೀಲ್ ತಾಲುಕಾ ಆಡಳಿತದ ಗಮನಕ್ಕೆ ತರದೇ,ಸ್ಥಳೀಯವಾಗಿ ರೋಗಿಗಳಿಗೆ ಆಂಬ್ಯುಲೆನ್ಸ್ ವ್ಯವಸ್ಥೆ ಕೂಡ ಮಾಡಿಲ್ಲ ಹೀಗಾಗಿ ರೋಗಿಗಳು ಪರದಾಡುವಂತಾಗಿದೆ.

**ಪಿಡಿಓ ಅಲಕ್ಷ:** ಹಾಲಭಾವಿ ಗ್ರಾಮದ ಬೀದಿ ಬೀದಿಯಲ್ಲಿ ಅಸ್ವಚ್ಚತೆ ಹೆಚ್ಚಿದ್ದು,ಚರಂಡಿಗಳು ತುಂಬಿ ಹರಿಯುತ್ತಿವೆ,ಜನರು ಅನಾರೋಗ್ಯ ಸಮಸ್ಯೆಯಿಂದ ಬಳಲುತ್ತಿದ್ದರು,ಸ್ಥಳೀಯ ಗ್ರಾಮ ಪಂಚಾಯತ ಪಿಡಿಓ ಸ್ಥಳಕ್ಕೆ ಭೇಟಿ ನೀಡದೇ ಬೇಜವಬ್ದಾರಿ ತೋರಿದ್ದಾರೆ.

**ತಹಶಿಲ್ದಾರ ಎದರು ಜನಾಕ್ರೋಶ :** ಹಾಲಭಾವಿ ಗ್ರಾಮಕ್ಕೆ ಭೇಟಿ ನೀಡಿದ ತಹಶಿಲ್ದಾರ ಸತ್ಯಮ್ಮರ ಎದರು ಸ್ಥಳೀಯರು ಟಿಎಚ್‌ಓ ,ಇಓ,ಪಿಡಿಓ ಅವರ ನಿರ್ಲಕ್ಷದ ವಿರುದ್ದ ಆಕ್ರೋಶ ವ್ಯಕ್ತಪಡಿಸಿ ಕ್ರಮ ತೆಗೆದುಕೊಳ್ಳಲು ಪಟ್ಟು ಹಿಡಿದರು.

**ತಾಲೂಕ ಆಡಳಿತ ನಿರ್ಲಕ್ಷ್ಯ :** ನಮ್ಮ ಗ್ರಾಮದಲ್ಲಿ ಆಗಸ್ಟ್ 25 ರಂದು ಖುದ್ದು ನಾನೇ ಇಓ ರನ್ನು ಭೇಟಿಯಾಗಿ 20 ಜನಕ್ಕೆ ಡೆಂಗ್ಯೂ ಶಂಕೆ ಬೆಳಕಿಗೆ ಬಂದಿದೆ ಎಂದು ಗಮನಕ್ಕೆ ತಂದು ಅವರನ್ನೂ ಗ್ರಾಮಕ್ಕೆ ಅಂದೇ ಕರೆಸಲಾಗಿತ್ತು,



**ಈ ಘಟನೆ ನಡೆದು ಇಂದಿನವರೆಗೆ ಗ್ರಾಮದಲ್ಲಿ 300 ಜನ ಜ್ವರದಿಂದ ಬಳುಲುತ್ತಿದ್ದರೂ ತಾಲುಕಾ ಆಡಳಿತ ಮುಂಜಾಗೃತ ವಹಿಸುತ್ತಿಲ್ಲ**

**– ಪ್ರೇಮಗೌಡ ಪೋಲಿಸ್ ಪಾಟೀಲ್ ಹಾಲಭಾವಿ**

**ಹಾಲಭಾವಿ ಡೆಂಗ್ಯೂ ಪ್ರಕರಣ, ಮಂಗಳವಾರ ರಾತ್ರಿಯಷ್ಟೇ ಗಮನಕ್ಕೆ ಬಂದಿದ್ದು, 300 ಜನ ಕ್ಕೆ ಡೆಂಗ್ಯೂ ಶಂಕೆ ಎಂದು ಹೇಳಲಾಗುತ್ತಿದ್ದೂ,ಸ್ಥಳಕ್ಕೆ ಭೇಟಿ ನೀಡಿ ಆರೋಗ್ಯ ಇಲಾಖೆ, ಹಾಗೂ ಸ್ಥಳೀಯರಿಗೆ ಮುಂಜಾಗೃತ ಕ್ರಮ ವಹಿಸಲು ಸೂಚಿಸಿದ್ದೇನೆ – ಸತ್ಯಮ್ಮ,ತಹಶೀಲ್ದಾರರು**

**ನನ್ನ ಮನೆಯಲ್ಲಿ ಹತ್ತು ಜನ ಕಟುಂಬ ಸದಸ್ಯರಿದ್ದು,ಹತ್ತು ಜನರು ಜ್ವರದಿಂದಬಳಲುತ್ತಿದ್ದೂ ವಾಹನ ವ್ಯವಸ್ಥೆಯಿಲ್ಲದೇ ಪರದಾಡಬೇಕಿದೆ**

**– ಬಾಲಪ್ಪ ಅಗಸಿಮುಂದಿನ ಹಾಲಭಾವಿ.**

## ದಸರಾ ಉದ್ಘಾಟನೆಗೆ ಬಾನು ಮುಷ್ತಾಕ್; ಖಂಡನೆ



ಯುವ ಮಾರ್ಗ ಸುದ್ದಿ

**ಮಾನ್ವಿ,ಸೆ.10–** ಐತಿಹಾಸಿಕ ಪ್ರಸಿದ್ಧ ಹಿಂದೂ ಧಾರ್ಮಿಕ ಕ್ಷೇತ್ರ ಮೈಸೂರು ದಸರಾ ಉದ್ಘಾಟನೆಗೆ ಕನ್ನಡಾಂಬೆಗೆ ಅವಹೇಳನಕಾರಿ ಹೇಳಿಕೆ ನೀಡಿ, ಹಿಂದೂ ಧಾರ್ಮಿಕ ಭಾವನೆಗಳ ಕುರಿತು ಅಸಹನೆ ಹೊಂದಿರುವ ಭಾನು ಮುಷ್ತಾಕ್ ಅವರನ್ನು ನೇಮಿಸಿರುವ ಕಾಂಗ್ರೆಸ್ ಸರ್ಕಾರದ ನಡೆಯನ್ನು ಖಂಡಿಸಿ 'ಯುವಾ ಬ್ರಿಗೇಡ್' ಸಂಘಟನೆಯ ವತಿಯಿಂದ ಮಾನ್ವಿಯ ತಾಲೂಕ ದಂಡಾಧಿಕಾರಿಗಳು ಮತ್ತು ತಹಶಿಲ್ದಾರರ ಮೂಲಕ ರಾಜ್ಯಪಾಲರಿಗೆ ಮನವಿ ಪತ್ರ ಸಲ್ಲಿಸಲಾಯಿತು.

ಹಿಂದೂಗಳ ಧಾರ್ಮಿಕ ಭಾವನೆಯನ್ನು ಕದಡುವ ಉದ್ದೇಶ ಹೊಂದಿರುವ ಸಿದ್ಧರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಬಾನು ಮುಷ್ತಾಕ್ ಅವರನ್ನು ಉದ್ಘಾಟಕರನ್ನಾಗಿ ಬಾನು ಮುಷ್ತಾಕ್ ರನ್ನು ಆಹ್ವಾನಿಸಿದ್ದು ನಾಡಿನ ಹಿಂದೂ ಸಮಾಜವನ್ನು ಅವಹೇಳನ ಮಾಡುತ್ತಿದೆ, ಅವರ ಧಾರ್ಮಿಕ ನಂಬಿಕೆಗಳಿಗೆ ಧಕ್ಕೆ ತರುತ್ತಿದೆ. ಕೂಡಲೇ ಸರ್ಕಾರ ಈ ನಿರ್ಧಾರವನ್ನು ಕೈ ಬಿಡದಿದ್ದರೆ ಮುಂದೆ ಹಿಂದೂಗಳ ಕೋಪಕ್ಕೆ ಗುರಿಯಾಗಬೇಕಾದೀತು. ಇಡೀ ಸಮುದಾಯ ಪ್ರತಿಭಟನೆಯ ಹಾದಿ ತುಳಿಯಲು ಅವಕಾಶ ಮಾಡಿಕೊಡಬಾರದು ಎಂದು ಮನವಿಯನ್ನು ಒತ್ತಾಯಿಸಲಾಯಿತು.

ಯುವಾ ಬ್ರಿಗೇಡ್ ಸಂಘಟನೆಯ ಜಿಲ್ಲಾ ಸಂಚಾಲಕ ಬಸವರಾಜ ಬೊಮ್ಮನಾಳ, ಶೃತಿ ಮಾನ್ವಿ, ಗುರುಬಸವ ಬೊಮ್ಮನಾಳ, ಕ್ಷೀರಲಿಂಗ, ಭೀಮಣ್ಣ ,ನಾಗೇಂದ್ರ, ನರಸಪ್ಪ, ತಿಮ್ಮಪ್ಪ, ಚಂದ್ರು,ಮಂಜುನಾಥ, ಮಹಾದೇವ ಬೊಮ್ಮನಾಳ, ನರಸಿಂಹ ಮಾನ್ವಿ, ಸಿದ್ಧಲಿಂಗಪ್ಪ ಹುಡೇದ ಸೇರಿದಂತೆ ಇತರರು ಇದ್ದರು.

ಯುವ ಮಾರ್ಗ

ಗುರುವಾರ : 11–09–2025

## ಮೊದಲನೇಯ ಪುಟದಿಂದ

# ಓಪೆಕ್ ಆಸ್ಪತ್ರೆಗೆ ನ್ಯಾ.ಹೆಚ್.ಎ.ಸಾತ್ವಿಕ್ ದಿಢೀರ್ ಭೇಟಿ; ಪರಿಶೀಲನೆ

ರೀತಿ ರೋಗಿಗಳು ವೈದ್ಯರಿಗಾಗಿ ಕಾಯುವುದು ಆಸ್ಪತ್ರೆಯಲ್ಲಿ ತಪ್ಪಬೇಕು. ಸಂಬಂಧಿಸಿದ ವೈದ್ಯಾಧಿಕಾರಿಗಳಿಗೆ ಈ ವಿಷಯ ತಿಳಿಸಿ ಸರಿಪಡಿಸಿಕೊಳ್ಳಲು ನ್ಯಾಯಾಧೀಶರು ಸೂಚನೆ ನೀಡಿದರು.

ಯುರೋಲಾಜಿ ವಿಭಾಗ ಸೇರಿದಂತೆ ಬೇರೆ ಬೇರೆ ಕಡೆಗಳಲ್ಲಿ ಸಂಚರಿಸಿದ ನ್ಯಾಯಾಧೀಶರು, ಅಲ್ಲಿ ದಾಖಲಾಗಿದ್ದ ರೋಗಿಗಳೊಂದಿಗೆ ಮಾತನಾಡಿದರು. ಆಸ್ಪತ್ರೆಯಲ್ಲಿ ಸಿಗುವ ವಿವಿಧ ಚಿಕಿತ್ಸೆ ಹಾಗೂ ಊಟದ ವ್ಯವಸ್ಥೆ ಕುರಿತು ರೋಗಿಗಳಿಂದ ಮಾಹಿತಿ ಪಡೆದರು.

ನ್ಯೂರೋ, ಐಸಿಯು ಹಾಗೂ ನೆಪ್ರಾಲಜಿ ವಿಭಾಗದಲ್ಲಿದ್ದ ರೋಗಿಗಳನ್ನು ಸಹ ನ್ಯಾಯಾಧೀಶರು ಮಾತನಾಡಿಸಿದರು. ಆಸ್ಪತ್ರೆಯಲ್ಲಿ ಉತ್ತಮ ರೀತಿಯ ಚಿಕಿತ್ಸೆ ಸಿಗುತ್ತಿದೆ ಎಂದು ಅಲ್ಲಿದ್ದ ರೋಗಿಗಳು ತಿಳಿಸಿದಾಗ, ಉತ್ತಮವಾಗಿ ಕೆಲಸ ಮಾಡುವ ವೈದ್ಯರ ಕಾರ್ಯವೈಖರಿಯ ಬಗ್ಗೆ ನ್ಯಾಯಾಧೀಶರು ಮೆಚ್ಚುಗೆ ವ್ಯಕ್ತಪಡಿಸಿದರು.

ಈ ವೇಳೆ, ಆಸ್ಪತ್ರೆಯಲ್ಲಿನ ವೈದ್ಯರು ಮತ್ತು ವೈದ್ಯಾಧಿಕಾರಿಗಳೊಂದಿಗೆ ಮಾತನಾಡಿದ ನ್ಯಾಯಾಧೀಶರು, ರೋಗಿಗಳಿಗೆ ಹೊರಗಡೆ ಔಷಧಿ ಬರೆಯದೆ, ಆಸ್ಪತ್ರೆಯಲ್ಲಿ ಸಿಗುವ ಉತ್ತಮ ಗುಣಮಟ್ಟದ ಔಷಧಿ ನೀಡಬೇಕು. ಔಷಧಿಗಳ ವಿತರಣೆ ವೇಳೆ ರೋಗಿಗಳಿಂದ ಯಾವುದೇ ಕಾರಣಕ್ಕೂ ಹಣ ಪಡೆಯಬಾರದು. ಆಸ್ಪತ್ರೆಗೆ ಬರುವ ಬಹುತೇಕ ಜನರು ಬಡವರಾಗಿದ್ದು, ಅವರಿಗೆ ಉತ್ತಮ ಚಿಕಿತ್ಸೆ ನೀಡುವುದು ವೈದ್ಯರ ಕರ್ತವ್ಯವಾಗಿದೆ. ಅದನ್ನು ಅರಿತು ಕಾರ್ಯನಿರ್ವಹಿಸಬೇಕೆಂದು ತಿಳಿಸಿದರು.

ಎಲ್ಲಾ ವೈದ್ಯರು ಆಸ್ಪತ್ರೆಗೆ ಸರಿಯಾದ ಸಮಯಕ್ಕೆ ಆಗಮಿಸಬೇಕು. ಸಮಯಕ್ಕೆ ಸರಿಯಾಗಿ ಬಾರದ ವೈದ್ಯರ ವಿರುದ್ಧ ಕ್ರಮಜರುಗಿಸಬೇಕೆಂದು ಆಸ್ಪತ್ರೆಯ ವಿಶೇಷಾಧಿಕಾರಿಗಳಿಗೆ ಸೂಚನೆ ನೀಡಿದರು.

ರೋಗಿಗಳಿಗೆ ಉತ್ತಮ ವೈದ್ಯಕೀಯ ಸೇವೆ, ಉಪಚಾರ ಮತ್ತು ಔಷಧೋಪಚಾರವನ್ನು ಸಮರ್ಪಕವಾಗಿ ನೀಡುವಂತೆ ಸಂಬಂಧಿಸಿದ ವೈದ್ಯರಿಗೆ ನಿರ್ದೇಶನ ನೀಡಲಾಯಿತು.

ಇದೇ ಸಂದರ್ಭದಲ್ಲಿ ಓಪೆಕ್ ಆಸ್ಪತ್ರೆಯ ವಿಶೇಷಾಧಿಕಾರಿ ಡಾ.ರಮೇಶ ಸಾಗರ್, ಆಸ್ಪತ್ರೆಯ ವಿವಿಧ ವಿಭಾಗಗಳ ಮುಖ್ಯಸ್ಥರಾದ ಡಾ.ಪ್ರಸಾದ್, ಡಾ.ವಿನಿತು, ಡಾ.ವಿನಯ್ ಬದ್ರಿ, ಡಾ.ಮಂಜುನಾಥ, ಡಾ.ಶೈಲೇಶ್, ಡಾ.ರಾಘವೇಂದ್ರ, ಡಾ.ವಿಜಯ ಮಹಾಂತೇಶ್, ಡಾ.ಅನಿಲ್ ಗೋಪಿನಾಥ್, ಡಾ.ಸುರೇಶ್ ಸಾಗರ ಸೇರಿದಂತೆ ಇತರರು ಇದ್ದರು.

# ಎರಡು ವರ್ಷ ಶಾಸಕರಾಗಿ ಮಾಡಿದ ಕೆಲಸ ತೃಪ್ತಿ ತಂದಿದೆ: ಕರೆಮ್ಮ

ಅಭಿವೃದ್ಧಿಪರ ಕೆಲಸಗಳು ನನಗೆ ಖುಷಿ ತಂದಿವೆ. ಉಳಿದ ಮೂರು ವರ್ಷ ಅವಧಿಯಲ್ಲಿ ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಇನ್ನಷ್ಟು ಕೆಲಸ ಮಾಡುತ್ತೇನೆ ಎಂದರು.

ಮಸರಕಲ್ ಗ್ರಾಮದಲ್ಲಿ ಸಿಸಿ ರಸ್ತೆ ಆಗುವ ಚರಂಡಿ ನಿರ್ಮಾಣಕ್ಕೆ 80 ಲಕ್ಷ, ಮಸರಕಲ್ ದಲಿತ ಕಾಲೋನಿಯಲ್ಲಿ ಸಿಸಿ ರಸ್ತೆ ಆಗುವ ಚರಂಡಿ ನಿರ್ಮಾಣಕ್ಕೆ ಒಂದು ಕೋಟಿ, ಕೆಇಬಿ 110 ಕೆವಿ ಉಪ ಕೇಂದ್ರ ನಿರ್ಮಾಣಕ್ಕೆ 19 ಕೋಟಿ, ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಶವಗಾರ ನಿರ್ಮಾಣಕ್ಕೆ 20 ಲಕ್ಷ, ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಕಾಂಪೌಂಡ್ ನಿರ್ಮಾಣಕ್ಕೆ 50 ಲಕ್ಷ, ಮಸರಕಲ್ ಗ್ರಾಮದ ಮರಡಿ ಮಲ್ಲಿಕಾರ್ಜುನ ದೇವಸ್ಥಾನಕ್ಕೆ ಹೋಗುವ ದಾರಿ ಅಭಿವೃದ್ಧಿಗೆ 10 ಲಕ್ಷ, ಕಾಕರಕಲ್ ಗ್ರಾಮದಲ್ಲಿ ಸಿಸಿ ರಸ್ತೆ ಮತ್ತು ಚರಂಡಿ ನಿರ್ಮಾಣಕ್ಕೆ 53 ಲಕ್ಷ ಅದೇ ಗ್ರಾಮದ ಕರಿಯಪ್ಪ ತಾತ ದೇವಸ್ಥಾನ ಅಭಿವೃದ್ಧಿಗೆ 5 ಲಕ್ಷ, ರಾಮದುರ್ಗ ಗ್ರಾಮದಲ್ಲಿ ಕುಡಿಯುವ ನೀರಿನ ಪೈಪ್ ಲೈನ್ ಕಾಮಗಾರಿಗೆ 30 ಲಕ್ಷ ಅದೇ ಗ್ರಾಮದ ಎರಡು ಶಾಲಾ ಕಟ್ಟಡ ನಿರ್ಮಾಣಕ್ಕೆ 29 ಲಕ್ಷ, ರಾಮದುರ್ಗ ಗ್ರಾಮದ ಆಂಜನೇಯ ದೇವಸ್ಥಾನ ಅಭಿವೃದ್ಧಿಗೆ 10 ಲಕ್ಷ ಅನುದಾನ ನೀಡಲಾಗಿದೆ.

ಇದಲ್ಲದೆ ಸುಂಕೇಶ್ವರಹಾಳ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ 6ಹೆಚ್ಚುವರಿ ಕೊಠಡಿ ಮತ್ತು ಸ್ಮಾರ್ಟ್ ಕ್ಲಾಸ್ ನಿರ್ಮಾಣಕ್ಕೆ ಒಂದು ಕೋಟಿ, ಖಾನಾಪುರ ಗ್ರಾಮದ ಸಿಸಿ ರಸ್ತೆ ಮತ್ತು ಚರಂಡಿ ನಿರ್ಮಾಣಕ್ಕೆ 40 ಲಕ್ಷ ಅದೇ ಗ್ರಾಮದಲ್ಲಿ ನಾಲ್ಕು ಕೊಠಡಿಗಳ ಶಾಲಾ ಕಟ್ಟಡ ನಿರ್ಮಾಣಕ್ಕೆ 58 ಲಕ್ಷ, ಹೊನ್ನಟ್ಟಿಗೆ ಗ್ರಾಮದ ಮದರಕಲ್ ವರೆಗೆ ರಸ್ತೆ ನಿರ್ಮಾಣಕ್ಕೆ 5.5 ಕೋಟಿ, ಹೊನ್ನಟ್ಟಿಗೆ ಗ್ರಾಮದ ಸರ್ಕಾರಿ ಶಾಲೆಗೆ ಹೆಚ್ಚುವರಿ ಎರಡು ಕೊಠಡಿ ನಿರ್ಮಾಣಕ್ಕೆ 29 ಲಕ್ಷ, ಕೋಳೂರು ಗ್ರಾಮದಲ್ಲಿ ಸಿಸಿ ರಸ್ತೆ ಮತ್ತು ಚರಂಡಿ ನಿರ್ಮಾಣಕ್ಕೆ 40 ಲಕ್ಷ, ಶಾಂತಿಗೆರೆ ಗ್ರಾಮದಲ್ಲಿ ಸಿಸಿ ರಸ್ತೆ ಮತ್ತು ಚರಂಡಿ ನಿರ್ಮಾಣಕ್ಕೆ 30 ಲಕ್ಷ, ಹಿರೆರಾಯಕುಂಪಿ ಗ್ರಾಮದಲ್ಲಿ ಸಿಸಿ ರಸ್ತೆ ಮತ್ತು ಚರ್ಮಂಡಿ ನಿರ್ಮಾಣಕ್ಕೆ 30 ಲಕ್ಷ ರೂಪಾಯಿ ಅನುದಾನ ತರಲಾಗಿದೆ. ಒಟ್ಟಾರೆಯಾಗಿ 36 ಕೋಟಿ ಅನುದಾನವನ್ನ ವಿವಿಧ ಗ್ರಾಮಕ್ಕೆ ಹಂಚಿಕೆ ಮಾಡಲಾಗುವುದು ಇಂದು ಭೂಮಿ ಪೂಜೆ ನೆರವೇರಿಸಲಾಗುತ್ತಿದೆ ಎಂದರು.

ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ 3 ಹಂತದಲ್ಲಿ ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿಯಿಂದ ಅನುದಾನ ತಂದಿದ್ದು ಜನರು ಅದನ್ನು ಸದ್ಬಳಕೆ ಮಾಡಿಕೊಂಡು ಉತ್ತಮ ಕಾಮಗಾರಿ ಮಾಡಿಸಿಕೊಳ್ಳಬೇಕು ಎಂದರು.

ಈ ಸಂದರ್ಭದಲ್ಲಿ ಶರಣಪ್ಪ ಬಳೆ,ಆಜಿಸಾಬ್,ಶರಗೌಡ,ಗೊವಿಂದ ನಾಯಕ, ನಾಗರಾಜ ಪಾಟೀಲ, ಚೆನ್ನಪ್ಪ ಮಸೀದಪು, ಸಿದ್ದಣ್ಣ ಗಣೇಕಲ್, ಶಾಲಂ ಉದಾರ, ದಾವುದ್ ಔಂಟಿ, ಸೇರಿದಂತೆ ಇತರ ಇದ್ದರು.

# ಸರ್ಕಾರಿ ವೈದ್ಯಕೀಯ ಕಾಲೇಜುಗಳ ಎನ್‌ಆರ್‌ಐ ಕೋಟಾ ರದ್ದುಪಡಿಸಲು ಅಗ್ರಹಿಸಿ ಬೃಹತ್ ಪ್ರತಿಭಟನೆ

ನಿರ್ಧಾರವು ಎಐಡಿಎಸ್‌ಓವಿದ್ಯಾರ್ಥಿ ಸಂಘಟನೆ ಅತ್ಯುಗ್ರವಾಗಿ ಖಂಡಿಸುತ್ತದೆ ಇದನ್ನು ಕೂಡಲೇ ರದ್ದು ಪಡಿಸುವಂತೆ ಅವರು ಒತ್ತಾಯಿಸಿದರು.ವೈದ್ಯಕೀಯ ಶಿಕ್ಷಣದ ಕನಸು ಹೊತ್ತ ರಾಜ್ಯದ ಬಡ ವಿದ್ಯಾರ್ಥಿಗಳಿಗೆ ರಾಜ್ಯ ಸರ್ಕಾರ ಬಹುದೊಡ್ಡ ಅನ್ಯಾಯ ಮಾಡುತ್ತಿದೆ. ಈಗಾಗಲೇ ಅಖಿಲ ಭಾರತ ಕೋಟಾದಡಿ 15% ಸೀಟುಗಳನ್ನು ನೀಡಲಾಗುತ್ತಿದೆ. ಇನ್ನೂ 15% ಸೀಟುಗಳು ಎನ್‌ಆರ್‌ಐ ಕೋಟಾಗೆ ನೀಡಿದರೆ 200 ವಿದ್ಯಾರ್ಥಿಗಳ ಒಂದು ಬ್ಯಾಚಿನಲ್ಲಿ ಕೇವಲ 140 ಸೀಟುಗಳು ಮಾತ್ರ ರಾಜ್ಯದ ವಿದ್ಯಾರ್ಥಿಗಳಿಗೆ ಉಳಿದಂತಾಗುತ್ತದೆ.ಸರ್ಕಾರಿ ವೈದ್ಯಕೀಯ ಕಾಲೇಜುಗಳು ಆರ್ಥಿಕ ಹಿನ್ನೆಲೆಯನ್ನು ಲೆಕ್ಕಿಸದೆ ಅರ್ಹ ಮತ್ತು ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಗುಣಮಟ್ಟದ ಉನ್ನತ ಶಿಕ್ಷಣವನ್ನು ಒದಗಿಸಲು ಸ್ಥಾಪಿಸಲಾಗಿದೆ. ಶ್ರೀಮಂತ ಎನ್.ಆರ್.ಐ ವಿದ್ಯಾರ್ಥಿಗಳಿಗೆ ಸೀಟುಗಳನ್ನು ಮೀಸಲಿಡುವ ಮೂಲಕ, ವೈದ್ಯರಾಗಿ ಸಮಾಜಕ್ಕೆ ಸೇವೆ ಸಲ್ಲಿಸಲು ಬಯಸುವ ನೂರಾರು ಶ್ರಮಜೀವಿ, ಬಡ ಮತ್ತು ಮಧ್ಯಮ ವರ್ಗದ ಕುಟುಂಬಗಳ ಪ್ರತಿಭಾವಂತ ವಿದ್ಯಾರ್ಥಿಗಳ ಅವಕಾಶವನ್ನು ರಾಜ್ಯ ಸರ್ಕಾರವು ಮೊಟಕುಗೊಳಿಸುತ್ತಿದೆ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು.ಎಐಡಿಎಸ್‌ಓ ಜಿಲ್ಲಾ ಖಜಾಂಚಿ ವೆಂಕಟೇಶ ದೇವದುರ್ಗ ರವರು ಪ್ರತಿಭಟನೆಯನ್ನು ಉದ್ದೇಶಿಸಿ ಮಾತನಾಡಿ, ಕರ್ನಾಟಕದ ಸರ್ಕಾರಿ ವೈದ್ಯಕೀಯ ಕಾಲೇಜುಗಳಲ್ಲಿ 12,447 ಬೋಧಕ ಹುದ್ದೆಗಳು ಖಾಲಿ ಇರುವ ಸಮಯದಲ್ಲಿ, ಸರ್ಕಾರವು ಈ ಹುದ್ದೆಗಳನ್ನು ಭರ್ತಿ ಮಾಡಲು ಮತ್ತು ಮೂಲಸೌಕರ್ಯವನ್ನು ಸುಧಾರಿಸಲು ಆದ್ಯತೆ ನೀಡಿ, ಬೋಧಕವರ್ಗ ಮತ್ತು ಸೌಲಭ್ಯಗಳನ್ನು ಬಲಪಡಿಸುವ ಜವಾಬ್ದಾರಿ ಸರ್ಕಾರ ತೆಗೆದುಕೊಳ್ಳಬೇಕು. ಸರ್ಕಾರಿ ವೈದ್ಯಕೀಯ ಕಾಲೇಜುಗಳಲ್ಲಿ 15% ಎನ್.ಆರ್.ಐ ಕೋಟಾ ಯೋಚನೆ ಕೂಡಲೇ ಕೈ ಬಿಡಬೇಕು ಹಾಗೂ ಅರ್ಹ ಮತ್ತು ಪ್ರತಿಭಾವಂತ ಬಡ ವಿದ್ಯಾರ್ಥಿಗಳಿಗೆ ಅವಕಾಶ ಕಲ್ಪಿಸಬೇಕೆಂದು ಆಗ್ರಹಿಸಿದರು.ಪ್ರತಿಭಟನೆಯಲ್ಲಿ ಸಂಘಟನೆಯ ಜಿಲ್ಲಾ ಉಪಾಧ್ಯಕ್ಷರಾದ ಪ್ರೀತಿ ದೊಡ್ಡಮನಿ, ಗೋವಿಂದ ಯಳವಾರ, ನಾಗರಾಜ ರಾವೂರ್, ಜಿಲ್ಲಾ ಸಮಿತಿ ಸದಸ್ಯರಾದ ಯುವರಾಜ, ರಾಹುಲ್, ಸಿದ್ಧಾರ್ಥ್, ಸ್ಫೂರ್ತಿ, ಸಂಪತ ವಿದ್ಯಾರ್ಥಿಗಳಾದ ಅಕ್ಷತಾ , ಸುಧಾ , ಸೌಮ್ಯ , ಚೇತನ್, ಸಚಿನ್ ರೋಹಿತ್, ಬಸವರಾಜ್. ಹಾಗೂ ವಿದ್ಯಾರ್ಥಿ ಯುವಜನರು ಹೆಚ್ಚಿನ ಸಂಖ್ಯೆಯಲ್ಲ ಭಾಗವಹಿಸಿದ್ದರು.

# ಸಹಾಯಕ ಆಯುಕ್ತರ ನೇತೃತ್ವದಲ್ಲಿ 11 ಖಾಸಗಿ ಆಸ್ಪತ್ರೆಗಳ ಮೇಲೆ ದಿಢೀರ್ ದಾಳಿ, ಪರಿಶೀಲನೆ

ಖಾಸಗಿ ಆಸ್ಪತ್ರೆಗಳ ಮೇಲೆ ದಾಳಿ ಮಾಡಲಾಗಿದೆ. 11 ಆಸ್ಪತ್ರೆಗಳ ಪೈಕಿ ಕೆಲವು ಆಸ್ಪತ್ರೆಗಳು ಕೆಪಿಎಂಸಿ ಕಾಯಿದೆಯನುಸಾರ ನೋಂದಣಿ ಮಾಡದೇ ಇರುವುದು ಕಂಡು ಬಂದಿದ್ದು, ತಪ್ಪಿತಸ್ಥರ ಮೇಲೆ ಕಾನೂನು ಕ್ರಮ ಜರುಗಿಸಲಾಗುತ್ತದೆ ಎಂದು ತಿಳಿಸಿದರು.ಕರ್ನಾಟಕ ಖಾಸಗಿ ನರ್ಸಿಂಗ್ ನಿಯಂತ್ರಣ ಕಾಯಿದೆ (ಕೆಪಿಎಂಇ) ನಿಯಮಗಳು ಉಲ್ಲಂಘಿಸಿದ ಖಾಸಗಿ ವೈದ್ಯಕೀಯ ಸಂಸ್ಥೆ, ಕ್ಲಿನಿಕ್‌ಗಳ ವಿರುದ್ಧ ಪ್ರಕರಣ ದಾಖಲಿಸಿ ಕಾನೂನು ಕ್ರಮಕೈಗೊಳ್ಳಲಾಗುವುದು. ಜಿಲ್ಲೆಯಲ್ಲಿ ನಕಲಿ ವೈದ್ಯರ ಜಾಲದ ಮೇಲೆ ನಿಗಾ ಇರಿಸಿದ್ದು, ಈ ಕೆಟ್ಟ ಪದ್ಧತಿಯನ್ನು ಬೇರುಸಮೇತ ಕಿತ್ತೊಗೆಯಲು ಜಿಲ್ಲಾಧಿಕಾರಿಗಳ ಮಾರ್ಗದರ್ಶನದಲ್ಲಿ ಆರೋಗ್ಯ ಇಲಾಖೆಯು ಮುಂದಾಗಿದೆ ಎಂದರು.ಖಾಸಗಿ ಆಸ್ಪತ್ರೆಗಳು, ಕ್ಲಿನಿಕ್‌ಗಳು ತಮ್ಮ ಕೆಪಿಎಂಇ ನೋಂದಣಿ ಸಂಖ್ಯೆ, ಆಸ್ಪತ್ರೆಯ ಹೆಸರು ಮತ್ತು ಮಾಲೀಕರ ಹೆಸರನ್ನು ಕಟ್ಟಡದ ಮುಂಭಾಗದಲ್ಲಿ ಕಡ್ಡಾಯ ಪ್ರದರ್ಶಿಸಬೇಕು. ಈ ಬಗ್ಗೆ ಭೇಟಿ ವೇಳೆ ಆಯಾ ಆಸ್ಪತ್ರೆಯ ಮಾಲೀಕರು ಮತ್ತು ಸಿಬ್ಬಂದಿಗೆ ಸೂಚಿಸಲಾಗಿದೆ ಎಂದರು.

ಕೆಪಿಎಂಇ ಕಾಯ್ದೆಯನುಸಾರ ಸಾರ್ವಜನಿಕರ ಮಾಹಿತಿಗಾಗಿ ಆಸ್ಪತ್ರೆಯಲ್ಲಿ ಲಭ್ಯವಿರುವ ಸೇವೆಗಳ ವಿವರವನ್ನು ಆಸ್ಪತ್ರೆಯ ವರಣದ ಪ್ರಮುಖ ಸ್ಥಳಗಳಲ್ಲಿ ಸ್ಪಷ್ಟವಾಗಿ ಪ್ರದರ್ಶಿಸಬೇಕು. ದಿಢೀರ್ ಭೇಟಿ ವೇಳೆ ಈ ಬಗ್ಗೆ ಪರಿಶೀಲಿಸಲಾಗಿದೆ. ಇಂತಹ ಮಾರ್ಗಸೂಚಿ ಅಂಶಗಳನ್ನು ಕಡ್ಡಾಯ ಪಾಲಿಸುವಂತೆ ಸೂಚಿಸಲಾಗಿದೆ ಎಂದು ಡಿಎಚ್‌ಓ ಅವರು ತಿಳಿಸಿದರು.ಈ ವೇಳೆ ಜಿಲ್ಲಾ ಆರೋಗ್ಯ ಕುಟುಂಬ ಕಲ್ಯಾಣ ಅಧಿಕಾರಿ ಡಾ.ಶಿವುಕುಮಾರ್, ಐಎಮ್‌ಎ ಸದಸ್ಯರಾದ ಡಾ.ಹರ್ಷ ಪಾಟೀಲ್, ಆಯುಷ್ ಇಲಾಖೆಯ ಅಧಿಕಾರಿ ಡಾ.ಶಂಕರಗೌಡ ಎಸ್.ಪಾಟೀಲ್ ಸೇರಿದಂತೆ ರಾಯಚೂರು ಮಹಾನಗರ ಪಾಲಿಕೆಯ ವಿವಿಧ ಅಧಿಕಾರಿಗಳು ಇದ್ದರು.

# ಭ್ರಷ್ಟಾಚಾರ ಆರೋಪ:69 ಕಡೆ ಲೋಕಾ ದಾಳಿ

**ಬೀದರ್, ಸೆ.10–**ನಗರದ ಪಶುವೈದ್ಯಕೀಯ ಮೀನುಗಾರಿಕೆ ವಿಜ್ಞಾನಿಗಳ ವಿವಿಯಲ್ಲಿ ನಡೆದಿದೆ ಎನ್ನಲಾದ ಭ್ರಷ್ಟಾಚಾರ ಆರೋಪ ಸಂಬಂಧ ಲೋಕಾಯುಕ್ತ ಅಧಿಕಾರಿಗಳು ಇಂದು ಬೆಳಗ್ಗೆ ಏಕಕಾಲದಲ್ಲಿ ರಾಜ್ಯದ 69 ಕಡೆಗಳಲ್ಲಿ ದಾಳಿ ನಡೆಸಿದ್ದಾರೆ.

ವಿವಿಯಲ್ಲಿ ನಡೆದಿದೆ ಎನ್ನಲಾದ ಭ್ರಷ್ಟಾಚಾರ ಆರೋಪ ಸಂಬಂಧ ಬೀದರ್ ಲೋಕಾಯುಕ್ತ ಕಚೇರಿಯಲ್ಲಿ ಬೆಂಗಳೂರಿನ ವೆಂಕಟ್ ರೆಡ್ಡಿ ನೀಡಿದ್ದ ದೂರು ಹಿನ್ನಲೆಯಲ್ಲಿ ವಿವಿಯ ಅಧಿಕಾರಿಗಳು, ಸಿಬ್ಬಂದಿ ಮನೆಗಳು, ಕಚೇರಿಗಳ ಮೇಲೆ ದಾಳಿ ನಡೆಸಲಾಗಿದೆ.

2021ರಲ್ಲಿ ವಿವಿ ವ್ಯಾಪ್ತಿಯಲ್ಲಿ ಕೆಲಸ ನಿರ್ವಹಿಸಿದ ಅಧಿಕಾರಿಗಳು, ಸಿಬ್ಬಂದಿ ಮನೆಗಳು, ಕಚೇರಿಗಳಲ್ಲಿ ದಾಖಲೆಗಳ ಪರಿಶೀಲನೆ ನಡೆಸಲಾಗುತ್ತಿದೆ.

ಬೀದರ್ ಜಿಲ್ಲೆಯ 24 ಕಡೆ, ಬೆಂಗಳೂರಿನ 31 ಕಡೆ, ಕೊಪ್ಪಳ 2 ಕಡೆ, ಚಿಕ್ಕಮಗಳೂರು ಜಿಲ್ಲೆಯ 2 ಕಡೆ, ಹಾಸನ, ರಾಮನಗರ, ಕೋಲಾರ, ಉಡುಪಿ ಸೇರಿದಂತೆ ರಾಜ್ಯಾದ್ಯಂತ 69 ಕಡೆ ದಾಳಿ ನಡೆಸಿ ಶೋಧ ಕಾರ್ಯ ಕೈಗೊಳ್ಳಲಾಗಿದೆ.

ಕಳೆದ2021 ಅಕ್ಟೋಬರ್ 4ರಂದು 35 ಕೋಟಿ ರೂ. ಹಗರಣ ನಡೆದಿದೆ ಎಂದು ದೂರಿನಲ್ಲಿ ದೂರುದಾರರು ಉಲ್ಲೇಖಿಸಿದ್ದರು. ಈ ಸಂಬಂಧ ಲೋಕಾಯುಕ್ತ ನಡೆಸಿದ ತನಿಖೆಯಲ್ಲಿ, 22 ಕೋಟಿ ಹಗರಣ ನಡೆದಿರುವುದು ಪತ್ತೆಯಾಗಿತ್ತು.



ವಿಶ್ವವಿದ್ಯಾಲಯದ ಕಂಟ್ರೋಲರ್ ಸುರೇಶ್ ಸಹೋದರ ಮಲ್ಲಿಕಾರ್ಜುನ್ ಅವರ ಚಿಕ್ಕಮಗಳೂರಿನಲ್ಲಿರುವ ಮನೆಯ ಮೇಲೆ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿದ್ದಾರೆ. ಚಿಕ್ಕಮಗಳೂರಿನ ಕಲ್ಯಾಣನಗರದ ಮಲ್ಲಿಕಾರ್ಜುನ್ ನಿವಾಸಕ್ಕೆ ಲೋಕಾಯುಕ್ತ ಡಿವೈಎಸ್‌ಪಿ ತಿರುಮಲೇಶ್ ನೇತೃತ್ವದಲ್ಲಿ ದಾಳಿ ನಡೆದಿದೆ. ಸುರೇಶ್ 2017 ರಲ್ಲಿ ಬೀದರ್‌ನ ಪಶುವೈದ್ಯಕೀಯ ಮೀನುಗಾರಿಕೆ ವಿಜ್ಞಾನಿಗಳ ವಿವಿಯಲ್ಲಿ ಕಂಟ್ರೋಲರ್ ಆಗಿ ಕಾರ್ಯನಿರ್ವಹಿಸಿದ್ದರು.

# ಸಮರ್ಪಕ ಬಸ್ ಸೌಲಭ್ಯ ಒದಗಿಸಿ

**ಬಾಗಲಕೋಟೆ, ಸೆ10–** ಶಾಲಾ, ಕಾಲೇಜು ವಿದ್ಯಾರ್ಥಿಗಳಿಗೆ ಅನುಗುಣವಾಗಿ ಗ್ರಾಮೀಣ ಭಾಗಕ್ಕೆ ಸಮರ್ಪಕ ಬಸ್ ಸೌಲಭ್ಯ ಒದಗಿಸುವಂತೆ ಬೀಳಗಿ ಶಾಸಕ ಹಾಗೂ ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷ ಜೆ.ಟಿ.ಪಾಟೀಲ ಅಧಿಕಾರಿಗಳಿಗೆ ಸೂಚಿಸಿದರು.

ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ವಿಭಾಗೀಯ ಕಚೇರಿಯಲ್ಲಿ ನಡೆದ ಬೀಳಗಿ ಕ್ಷೇತ್ರದ ಪ್ರಯಾಣಿಕರ ಸಮಸ್ಯೆಗಳ ಕುರಿತು ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ದೂರದ ಊರುಗಳಿಗೆ ಹಾಗೂ ಅಂತರರಾಜ್ಯಗಳಿಗೆ ಬಸ್‌ಗಳನ್ನು ಬಿಡುವುದಕ್ಕಿಂತ ಮೊದಲು ಸ್ಥಳೀಯ ಮಟ್ಟದಲ್ಲಿ ಸಂಪೂರ್ಣ ಸಾರಿಗೆ ಸೌಲಭ್ಯ ಒದಗಿಸುವುದು ಮುಖ್ಯವಾಗಿದೆ. ಪ್ರತಿ ಹಳ್ಳಿಗೂ ಕೂಡ ಬಸ್ ಸಂಚರಿಸುವಂತೆ ಅಗತ್ಯ ಕ್ರಮಕೈಗೊಳ್ಳಲು ತಿಳಿಸಿದರು.

ಸಭೆಯಲ್ಲಿ ತೆಗೆದುಕೊಂಡ ಪರಿಹಾರಗಳನ್ನು ಕೇವಲ ಚರ್ಚೆಗಳಿಗೆ ಮಾತ್ರ ಸೀಮಿತಗೊಳಿಸದೆ ಅವುಗಳನ್ನು ಕಾರ್ಯರೂಪಕ್ಕೆ ತರುವಂತೆ ಅಧಿಕಾರಿಗಳಿಗೆ ಸೂಚಿಸಿದರು. ವಿಶೇಷವಾಗಿ, ಬಸ್ ಚಾಲಕರಿಗೆ ಸೂಕ್ತ ಅರಿವು ಮೂಡಿಸಿ ಮುಂಜಾನೆಯ ಸಮಯದಲ್ಲಿ ಶಾಲಾ ಹಾಗೂ ಕಾಲೇಜು ವಿದ್ಯಾರ್ಥಿಗಳಿಗೆ ಸರಿಯಾದ ಸಮಯಕ್ಕೆ ಬಸ್ ಸೇವೆಯನ್ನು ಒದಗಿಸಬೇಕು. ಅದರಂತೆ, ಬೀಳಗಿ ಡಿಪೊ?ದಿಂದ ಎರಡು ದಿನದೊಳಗೆ ವಿಜಯಪುರ ಮಾರ್ಗವಾಗಿ ಸಂಚರಿಸುವ ಎರಡು ಬಸ್‌ಗಳನ್ನು ಸ್ಥಳೀಯ ಹಳ್ಳಿಗಳಿಗೆ ಸಂಪರ್ಕ ಕಲ್ಪಿಸಲು ಕ್ರಮವಹಿಸಲು ಸೂಚಿಸಿದರು.

ಬೀಳಗಿ ಕ್ರಾಸ್‌ನಿಂದ ಸರ್ಕಾರಿ ಆಸ್ಪತ್ರೆಗೆ ರಾತ್ರಿ 9 ಗಂಟೆಯವರೆಗೆ ಒಂದು ಬಸ್ ಸೇವೆ ದೊರಕಬೇಕು. ಕ್ಷೇತ್ರದ ಯಾವುದೇ ಗ್ರಾಮದ




ವಿದ್ಯಾರ್ಥಿಗಳಿಗೆ ತೊಂದರೆಯಾಗುವ ಸಂದರ್ಭಗಳಲ್ಲಿ ಹಾಗೂ ನಿಗದಿತ ಸ್ಥಳ ಬಿಟ್ಟು ಬೇರೆಕಡೆಗಳಲ್ಲಿ ನಿಲ್ಲುವ ಚಾಲಕರ ಮೇಲೆ ಶಿಸ್ತು ಕ್ರಮ ಕೈಗೊಳ್ಳಬೇಕು. ಹೂಲಗೇರಿ, ಸೊಕನಾದಗಿ, ಶೆಲ್ಲಿಕೇರಿ, ಅನವಾಲ, ನೀರಬೂದಿಹಾಳ, ಗಂಗನಬೂದಿಹಾಳ, ಕೆರಕಲಮಟ್ಟಿ, ಯಳ್ಳಿಗುತ್ತಿ, ಶಿರಗುಪ್ಪಿ, ಕುಂದರಗಿ, ಚಿಕ್ಕಾಲಗುಂಡಿ ಗ್ರಾಮಗಳಿಗೆ ಸಂಬಂಧಿಸಿದ ವಿದ್ಯಾರ್ಥಿಗಳ ಸಾರಿಗೆ ಸಮಸ್ಯೆಗಳಿಗೆ ಪರಿಹಾರ ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಲಾಯಿತು.

ಸಭೆಯಲ್ಲಿ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ವಿಭಾಗೀಯ ನಿಯಂತ್ರಣಾಧಿಕಾರಿ ಎನ್.ಟಿ.ಪಾಟೀಲ, ಜಿಲ್ಲಾ ಸಂಚಾರಿ ನಿಯಂತ್ರಣಾಧಿಕಾರಿ ಕೆ.ಕೆ.ಲಮಾಣಿ, ಡಿಎಂಇ ಅಶೋಕ ಡೆಂಗಿ, ಸಹಾಯಕ ಸಂಚಾರಿ ನಿಯಂತ್ರಣಾಧಿಕಾರಿ ಕಲ್ಲೊಳ್ಳಿ, ಬಾಗಲಕೋಟೆ ಡಿಪೋ ಮ್ಯಾನೇಜರ ಕೃಷ್ಣಾ ಚವ್ಹಾಣ, ಬೀಳಗಿ ಡಿಪೋ ಮ್ಯಾನೇಜರ ರಮೇಶ ಖೇಡದ ಸೇರಿದಂತೆ ಇತರ ಅಧಿಕಾರಿಗಳು ಉಪಸ್ಥಿತರಿದ್ದರು.

# ರಾಯಚೂರಿನ ಆಶ್ರಯ ಕಾಲೋನಿಯ ತಾಯಿ, ಮಗಳು ಕಾಣೆ: ಪತ್ತೆಗೆ ಪೊಲೀಸರ ಮನವಿ

**ರಾಯಚೂರು,ಸೆ.10–**ಇಲ್ಲಿನ ಮಾರ್ಕೆಟ್ ಯಾರ್ಡ ಪೊಲೀಸ್ ಠಾಣೆಯ ವ್ಯಾಪ್ತಿಯ ಚಂದ್ರಬಂಡ ರಸ್ತೆಯ ಹಳೆ ಆಶ್ರಯ ಕಾಲೋನಿಯ ನಿವಾಸಿಗಳಾದ ಪಾತೀಮಾ ಗಂಡ ಮಹದ್ ಶ್ಯಾಲಂ (45) ಹಾಗೂ ಆಕೆಯ ಮಗಳಾದ ಸಾನಿಯಾ ಬೇಗಂ ತಂದೆ ಮ ಹದ್ ಶ್ಯಾಲಂ (17) ಎಂಬ ವರು ಆಗಸ್ಟ್ 13ರ ಬೆಳಿಗ್ಗೆ 7.30 ಗಂಟೆ ಸುಮಾರಿಗೆ ಮನೆಯಲ್ಲಿ ಯಾರಿಗು ಏನು ಹೇಳದೆ ಕೇಳದೆ ಮನೆಯಲ್ಲಿದ್ದ 10 ಸಾ





ವಿರ ರೂ. ಹಣ ಮತ್ತು ಬೆಳ್ಳಿ ಕಾಲುಚೈನ್ ತೆಗೆದುಕೊಂಡು ಹೋದವರು ಇದುವರೆಗೂ ಮನೆಗೆ ವಾಪಸ್ಸು ಬಾರದೆ ಕಾಣೆಯಾಗಿದ್ದು, ಠಾಣೆಯಲ್ಲಿ ಗುನ್ನ ಸಂಖ್ಯೆ: 87/2025 ಕಲಂ ರಡಿ ಪ್ರಕರಣ ದಾಖಲಾಗಿದೆ.

ಪಾತೀಮಾ ಗಂಡ ಮಹದ್ ಶ್ಯಾಲಂ (45) ಅವರು 5.3 ಫೀಟ್ ಎತ್ತರ, ದುಂಡು ಮುಖ, ಕಪ್ಪು ಮೈಬಣ್ಣ ಸದೃಢ ಮೈಕಟ್ಟು, ಹೂಗಳುಳ್ಳ ಬೂದು ಬಣ್ಣದ ಸೀರೆ ಮತ್ತು ಬುರ್ಖಾ ಧರಿಸಲಾಗಿದ್ದು, ಕನ್ನಡ ಮತ್ತು ಹಿಂದಿ ಮಾತನಾಡುತ್ತಾಳೆ.

ಸಾನಿಯಾ ಬೇಗಂ ತಂದೆ ಮಹದ್ ಶ್ಯಾಲಂ (17) ಬಾಲಕಿಯು 5.6 ಫೀಟ್ ಎತ್ತರ, ಉದ್ದನೆಯ ಮುಖ, ಕಪ್ಪು ಮೈಬಣ್ಣ, ಸಾಧಾರಣ ಮೈಕಟ್ಟು, ಸ್ಕೈ ಬ್ಲೂ ಬಣ್ಣದ ಚೂಡಿದಾರ ಧರಿಸಲಾಗಿದ್ದು, ಕನ್ನಡ ಮತ್ತು ಹಿಂದಿ ಮಾತನಾಡುತ್ತಾಳೆ. ಈ ತಾಯಿ ಹಾಗೂ ಮಗಳ ಕುರಿತು ಮಾಹಿತಿ ಸಿಕ್ಕಲ್ಲಿ ಠಾಣೆಯ ದೂರವಾಣಿ ಸಂಖ್ಯೆ: 08532–235600, ಪಿಎಸ್‌ಐ ಮೊಬೈಲ್ ಸಂಖ್ಯೆ: 9480803849ಗೆ ಸಂಪರ್ಕ ಮಾಡಬಹುದಾಗಿದ ಎಂದು ಠಾಣೆಯ ಅಧಿಕಾರಿಗಳು ತಿಳಿಸಿ ದ್ದಾರೆ.

# ನೌಕರಿ ಒತ್ತಡದಲ್ಲಿ ಆರೋಗ್ಯ ಮರಿಬೇಡಿ:ಡಾ.ಬನದೇಶ್ವರ ಅಭಿಮತ

**ಯುವ ಮಾರ್ಗ ಸುದ್ದಿ**

**ದೇವದುರ್ಗ.ಸೆ.10–**ಎಲ್ಲರ ಜೀವನದಲ್ಲಿ ಕೆಲಸದ ಒತ್ತಡ ಇದ್ದೇ ಇರುತ್ತೆ. ಹಾಗಂತ ಆರೋಗ್ಯದ ಕಡೆಗಮನ ಕೊಡದೆ ಇರುವುದು ಸರಿಯಲ್ಲ. ಸಾರಿಗೆ ಸಂಸ್ಥೆ ನೌಕರರು ಕೆಲಸದ ಒತ್ತಡದ ನಡುವೆ ಉತ್ತಮಆರೋಗ್ಯ ಕಾಪಾಡಿಕೊಳ್ಳಲು ಮುಂದಾಗಬೇಕು ಎಂದು ತಾಲೂಕು ಆರೋಗ್ಯ ಅಧಿಕಾರಿ ಡಾ.ಬನದೇಶ್ವರ ಹೇಳಿದರು.

ಪಟ್ಟಣದ ಸಾರಿಗೆ ಸಂಸ್ಥೆ ಬಸ್ ಡಿಪೋದಲ್ಲಿ ಜಿಲ್ಲಾಡಳಿತ, ಜಿಪಂ ಹಾಗೂ ಜಿಲ್ಲಾಆರೋಗ್ಯ ಮತ್ತುಕುಟುಂಬ ಕಲ್ಯಾಣಇಲಾಖೆಯಿಂದ ಆಯೋಜಿಸಿದ್ದಆರೋಗ್ಯತಪಾಸಣೆ ಹಾಗೂ ಚಿಕಿತ್ಸಾ ಶಿಬಿರಕ್ಕೆ ಚಾಲನೆ ನೀಡಿ ಮಂಗಳವಾರ ಮಾತನಾಡಿದರು.ವಯಸ್ಸುಆದಂತೆಲ್ಲರೋಗ ನಿರೋಧಕ ಶಕ್ತಿ ಕಡಿಮೆಯಾಗುತ್ತಾ ಬರುತ್ತದೆ.ಅಂಥ ಸಂದರ್ಭದಲ್ಲಿರಕ್ತದೊತ್ತಡ, ಮಧುಮೇಹ, ಕ್ಯಾನ್ಸರ್,ಪಾರ್ಶ್ವವಾಯು ಹಾಗೂ ಹೃದಯ ಸಂಬಂಧಿತಕಾಯಿಲೆಗಳು ಬರುತ್ತವೆ.ತಂಬಾಕು,ಗುಟ್ಕಾ, ಪಾನ ಮಸಾಲ, ಬೀಡಿ,ಸಿಗರೇಟ್ ಸೇದುವುದರಿಂದ ರೋಗಗಳು ಬಹುಬೇಗ ಆವರಿಸಿಕೊಳ್ಳುತ್ತವೆ. ಅಧಿಕರಕ್ತದೊತ್ತಡ ಸಾಮಾನ್ಯಕಿಂತಅಧಿಕ ಚಲಿಸುವ ಕ್ರಿಯೆ ಹೊಂದಿರಲಿದೆ.ದೈಹಿಕ ಚಟುವಟಿಕೆಗಳು ಕಡಿಮೆಯಾದಾಗ,ಅತಿಯಾದಉಪ್ಪಿನಾಂಶವಿರುವಆಹಾರ ಸೇವಿಸುವುದರಿಂದ, ದುಶ್ಚಟಗಳಿಂದ ಈರೋಗಆವರಿಸುತ್ತದೆ.

ದೈಹಿಕ ಚಟುವಟಿಕೆಗಳು, ವ್ಯಾಯಾಮ,ವಾಕಿಂಗ್, ಕೊಬ್ಬು, ಸಕ್ಕರೆ, ಉಪ್ಪಿನಾಂಶಕಡಿಮೆಇರುವಊಟ ಮಾಡಬೇಕು. ಮಧುಮೇಹದಿಂದ ಆಗಾಗೆ ಮೂತ್ರ ವಿಸರ್ಜನೆ,ತೀ ವ್ರಬಾಯಾರಿಕೆ,ಹಸಿವು, ಧಣಿವು, ಆಯಾಸ, ಮಸುಕಾದದೃಷ್ಠಿ, ಅರೇನಿದ್ರಾ ವ್ಯವಸ್ಥೆ, ದೇಹದತೂಕ ಇಳಿಕೆ,ಚರ್ಮದ ಸಮಸ್ಯೆಗಳು,ಕೈಕಾಲುಗಳಲ್ಲಿ ಜುಮ್ಮೆನುಸುವಿಕೆ ಕಾಣಿಸಿಕೊಳ್ಳುತ್ತದೆ.ತಕ್ಷಣ ವೈದ್ಯರ ಭೇಟಿಯಾಗಿ ಚಿಕಿತ್ಸೆ ಪಡೆಯಬೇಕುಎಂದರು.

ಎನ್‌ಸಿಡಿ ವೈದ್ಯಾಧಿಕಾರಿಡಾ.ಅಫ್ಸಾನ್, ಡಿಪೋ ಮ್ಯಾನೇಜರ್ ರಾಮನಗೌಡ, ಸಂಚಾರ ನಿಯಂತ್ರಕಚನ್ನಪ್ಪ, ರಮೇಶ, ಬಾಬುರಾವ್, ಅಕ್ಷಯಕುಮಾರ, ಚನ್ನಬಸಯ್ಯ ಹಿರೇಮಠ,ಶಿವಪ್ಪ ಭೂಮನಗುಂಡ,ಗೀತಮ್ಮ, ಮಲ್ಲಿಕಾರ್ಜುನ,ಅಂಬಿಕಾ,ಜ್ಯೋತಿ, ಲಕ್ಷ್ಮಣ ಇದ್ದರು.

# ಮದ್ದೂರಿನಲ್ಲಿ ಧರ್ಮಾಂಧರ ಕಲ್ಲುತೂರಾಟಕ್ಕೆ ಪ್ರತಿಯಾಗಿ ಹಿಂದೂಪರ ಸಂಘಟನೆಗಳು ಶಕ್ತಿ ಪ್ರದರ್ಶನ

**ಮದ್ದೂರು,ಸೆ.10–** ಗಣಪತಿ ವಿಸರ್ಜನೆ ಮೆರವಣಿಗೆ ವೇಳೆ ಕಲ್ಲುತೂರಾಟ ಪ್ರಕರಣ ಸಂಬಂಧ ಪ್ರಕ್ಷುಬ್ಧಗೊಂಡಿದ್ದ ಮಂಡ್ಯ ಜಿಲ್ಲೆ ಮದ್ದೂರು ತಾಲೂಕಿನಲ್ಲಿ ಸೇರಿಗೆ ಸವ್ವಾ ಸೇರು ಎಂಬಂತೆ ಗಣಪತಿಗಳನ್ನು ಭಾರೀ ಬಿಗಿ ಭದ್ರತೆ ನಡುವೆ ವಿಸರ್ಜನೆ ಮಾಡಿ ಹಿಂದೂಪರ ಸಂಘಟನೆಗಳು ಶಕ್ತಿ ಪ್ರದರ್ಶನ ನಡೆಸಿದವು.

ಮದ್ದೂರಿನ ಹತ್ತು ಹಾಗೂ ಸುತ್ತಮುತ್ತಲಿನ ಗ್ರಾಮಗಳ 18 ಗಣಪತಿ ಸೇರಿದಂತೆ ಒಟ್ಟು 28 ಗಣಪತಿ ಮೂರ್ತಿಗಳನ್ನು ಪೊಲೀಸರ ಸರ್ಪಗಾವಲಿನ ನಡುವೆ ಹಿಂದೂ ಯುವಕರ ಮುಗಿಲು ಮುಟ್ಟಿದ ಜೈಕಾರ, ಹರ್ಷೋದ್ಗಾರದ ನಡುವೆ ಶಿಂಷಾ ನದಿಯಲ್ಲಿ ವಿಸರ್ಜನೆ ಮಾಡಿದರು.ಹಿಂದೂ ಸಂಘಟನೆಗಳ ಶಕ್ತಿ ಪ್ರದರ್ಶನವೆಂದೇ ಬಿಂಬಿತವಾಗಿದ್ದ ಮೆರವಣಿಗೆಗೆ ನಿರೀಕ್ಷೆಗೂ ಮೀರಿದ ಹಿಂದೂ ಯುವಕರು ಆಗಮಿಸಿ ಹಿಂದೂ ನಾವೆಲ್ಲಾ ಒಂದು ಎಂಬ ಸಂದೇಶವನ್ನು ರವಾನಿಸಿದರು.

ಬೂದಿ ಮುಚ್ಚಿದ ಕೆಂಡದಂತಿದ್ದ ಮದ್ದೂರು ಪಟ್ಟಣದಲ್ಲಿ ನಡೆದ ಗಣಪತಿ ವಿಸರ್ಜನೆಗೆ ಬಿಜೆಪಿ–ಜೆಡಿಎಸ್ ನಾಯಕರು ಬೆಂಬಲ ಕೊಟ್ಟಿದ್ದರು. ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ.ವಿಜಯೇಂದ್ರ, ವಿಧಾನಮಂಡಲದ ಉಭಯಸದನಗಳ ಪ್ರತಿಪಕ್ಷದ ನಾಯಕರಾದ ಆರ್.ಅಶೋಕ್, ಛಲವಾದಿ ನಾರಾಯಣಸ್ವಾಮಿ, ಮೈಸೂರು–ಕೊಡಗು ಸಂಸದ ಯದುವೀರ್ ಒಡೆಯರ್, ಶಾಸಕ ಚನ್ನಬಸಪ್ಪ, ಮಾಜಿ ಸಚಿವರಾದ ಸಿ.ಟಿ.ರವಿ, ಪುಟ್ಟರಾಜು, ಡಾ.ಅಶ್ವತ್ಥ ನಾರಾಯಣ, ನಟಿ ಸುಮಲತಾ ಅಂಬರೀಶ್, ಮಾಜಿ ಶಾಸಕರಾದ ಪ್ರಿ ತಂಗೌಡ, ಸುರೇಶ್‌ಗೌಡ, ತಮಣ್ಣ ಸೇರಿದಂತೆ ಎರಡೂ ಪಕ್ಷಗಳ ಪ್ರಮುಖರು ಭಾಗಿಯಾಗಿದ್ದರು.

11.45ಕ್ಕೆ ಮದ್ದೂರು ಪಟ್ಟಣದ ಕಾಶಿ ವಿಶ್ವನಾಥ ದೇವಸ್ಥಾನದಿಂದ ಮೆರವಣಿಗೆ ಆರಂಭವಾಗಿ ಹೊಳೆಬೀದಿ,ಪೇಟೆ ಬೀದಿ, ಟಿಬಿ ಸರ್ಕಲ್, ಹಳೆ ಬೆಂಗಳೂರು–ಮೈಸೂರು ರಸ್ತೆಯಲ್ಲಿ ಮೂರು ಕಿಲೋ ಮೀಟರ್ ಸಂಚರಿಸಿ ಕೊಲ್ಲಿ ಸರ್ಕಲ್ ಮೂಲಕ ಆಗಮಿಸಿ ಶಿಂಷಾ ನದಿಯಲ್ಲಿ ವಿಸರ್ಜನೆ ಮಾಡಲಾಯಿತು.

ಪೂಜೆ, ಪುನಸ್ಕಾರ, ಹೋಮ, ಹವನದಂತಹ ಸಂಪ್ರದಾಯಗಳ ನಡುವೆ ಶಿಂಷಾದಲ್ಲಿ ವಿಧಿವತ್ತಾಗಿ ವಿಸರ್ಜನೆ ಮಾಡಲಾಯಿತು.ಸುಮಾರು 3 ಕಿ.ಮೀ.ವರೆಗೂ ಸಾಗಿಬಂದ ಗಣೇಶ ಮೆರವಣಿಗೆಯಲ್ಲಿ ಡೊಳ್ಳು ಕುಣಿತ, ವೀರಗಾಸೆ, ಕಂಸಾಳೆ ಮತ್ತಿತರ ಸಾಂಸ್ಕೃತಿಕ ಕಾರ್ಯಕ್ರಮಗಳು ಅನಾವರಣಗೊಂಡವು. ಭಾರೀ ಸಂಖ್ಯೆಯಲ್ಲಿ ಸೇರಿದ್ದ ಯುವಕರು ಜೈ ಗಣೇಶ, ಜೈ ವಿನಾಯಕ ಘೋಷಣೆಗಳನ್ನು ಕೂಗಿ ಭಕ್ತಿಯನ್ನು ಮೆರೆದರು.

ಹಿಂದೂ ಗಣಪತಿ ವಿಸರ್ಜನೆ ಹಿನ್ನೆಲೆಯಲ್ಲಿ ಇಡೀ ಮದ್ದೂರು ಪಟ್ಟಣ ಎಲ್ಲೆಲ್ಲೂ ಕೇಸರಿಮಯವಾಗಿತ್ತು. ಮಂಡ್ಯ, ಶ್ರೀ?ರಂಗಪಟ್ಟಣ, ಮಳವಳ್ಳಿ ಸೇರಿದಂತೆ ತಾಲ್ಲೂಕಿನ ಸುತ್ತಮುತ್ತಲ ವಿನಾಯಕನ ಭಕ್ತರು ಭಾರೀ ಸಂಖ್ಯೆಯಲ್ಲಿ ಆಗಮಿಸಿದ್ದರು. ಬೆಳಿಗ್ಗೆಯಿಂದಲೇ ಪಟ್ಟಣಕ್ಕೆ ತಂಡೋಪತಂಡವಾಗಿ ಆಗಮಿಸಿದ ಯುವಕರು ಹಣೆಗೆ ತಿಲಕ, ತಲೆಗೆ ರುಮಾಲು, ಕೇಸರಿ ಶಾಲು ಧರಿಸಿ ಜೈಕಾರದ ಘೋಷಣೆಗಳನ್ನು ಕೂಗುತ್ತಿದ್ದರು.

ಐಬಿ ವೃತ್ತದಲ್ಲಿ ವಿಜಯೇಂದ್ರ, ಅಶೋಕ್ ಮತ್ತಿತರ ಗಣ್ಯರು ಮೆರವಣಿಗೆಗೆ ಪೂಜೆ ಸಲ್ಲಿಸಿ ಚಾಲನೆ ಕೊಟ್ಟರು. ಮೆರವಣಿಗೆಯಲ್ಲಿ ಸಾಗಿ ಬಂದ ತಮ ತಮ ನಾಯಕರನ್ನು ಹಿಂದೂ ಯುವಕರು ಹೊತ್ತು ಕುಣಿದ ದೃಶ್ಯವೂ ಕಂಡುಬಂದಿತು. ಸೂಕ್ಷ್ಮ ಮತ್ತು ಅತಿ ಸೂಕ್ಷ್ಮ ಪ್ರದೇಶಗಳಲ್ಲಿ ಮೆರವಣಿಗೆ ಸಾಗಿ ಬರುತ್ತಿದ್ದಂತೆ ಕೆಲವರು ಇದ್ದಕ್ಕಿದ್ದಂತೆ ಪಟಾಕಿಯನ್ನು ಸಿಡಿಸಿ ಸಂಭ್ರಮಿಸಿದರು.

**ಭಾರೀ ಭದ್ರತೆ :** ಗಣೇಶ ವಿಸರ್ಜನೆ ವೇಳೆ ಕಲ್ಲು ತೂರಾಟದಿಂದ ಪ್ರಕ್ಷುಬ್ಧಗೊಂಡಿದ್ದ ಮದ್ದೂರು ಪಟ್ಟಣದಲ್ಲಿ ಯಾವುದೇ ರೀತಿಯ ಅಹಿತಕರ ಘಟನೆ ನಡೆಯದಂತೆ ಪೊಲೀಸರು ಸರ್ಪಗಾವಲು ಹಾಕಿದ್ದರು.









ಸಾಮೂಹಿಕ ಗಣೇಶ ವಿಸರ್ಜನೆ ನಡೆಸಲಾಗುತ್ತಿದ್ದು, ಈ ಹಿನ್ನೆಲೆಯಲ್ಲಿ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಭದ್ರತೆ ಹೆಚ್ಚಿಸಲಾಗಿತ್ತು.

ಮುನ್ನೆಚ್ಚರಿಕಾ ಕ್ರಮವಾಗಿ ಕೆಎಸ್ಆರ್‌ಪಿ, ಡಿಎಆರ್ ತುಕಡಿಗಳು, ಆರ್‌ಎಎಫ್ ಅನ್ನು ಭದ್ರತೆಗಾಗಿ ನಿಯೋಜಿಸಲಾಗಿತ್ತು.ಮೆರವಣಿಗೆಗೂ ಮುನ್ನ ಐಬಿಯಲ್ಲಿ ದಕ್ಷಿಣ ವಲಯ ಐಜಿಪಿ ಬೋರಲಿಂಗಯ್ಯ, ಜಿಲ್ಲಾ ಎಸ್ಪಿ ಮಲ್ಲಿಕಾರ್ಜುನ್ ಬಾಲದಂಡಿ ಅವರ ನೇತೃತ್ವದಲ್ಲಿ ಐದು ಮಂದಿ ಎಸ್‌ಪಿ, ನಾಲ್ಕು ಮಂದಿ ಎಎಸ್‌ಪಿ ಸೇರಿದಂತೆ ಭದ್ರತೆಗೆ ಎರಡು ಸಾವಿರಕ್ಕೂ ಹೆಚ್ಚು ಪೊಲೀಸರನ್ನು ನಿಯೋಜಿಸಲಾಗಿತ್ತು.

**ಸರ್ಕಾರದ ವಿರುದ್ಧ ವಾಗ್ದಾಳಿ :** ಪ್ರತಿಭಟನಾ ಸಂದರ್ಭದಲ್ಲಿ ಮಾತನಾಡಿದ ವಿಜಯೇಂದ್ರ, ಅಶೋಕ್, ಸಿ.ಟಿ.ರವಿ ಸೇರಿದಂತೆ ಅನೇಕರು ರಾಜ್ಯಸರ್ಕಾರದ ವಿರುದ್ಧ ಬೆಂಕಿಯುಗುಳಿದರು.ಸರ್ಕಾರದ ತುಷ್ಟಿಕರಣದಿಂದಲೇ ಇಂದು ಹಿಂದೂಗಳ ಆರಾಧ್ಯದೈವ ಗಣೇಶನ ಮೆರವಣಿಗೆ ನಡೆಸದಂತಹ ಪರಿಸ್ಥಿತಿಯನ್ನು ಸರ್ಕಾರ ನಿರ್ಮಾಣ ಮಾಡಿದೆ. ಇದೇನು ಪ್ರಜಾಪ್ರಭುತ್ವ ವ್ಯವಸ್ಥೆಯೋ ಇಲ್ಲ ತಾಲಿಬಾನ್ ಸರ್ಕಾರವೋ ಎಂದು ಕಿಡಿಕಾರಿದರು.


ಕೆಲವರು ವೋಟ್‌ಬ್ಯಾಂಕ್‌ಗಾಗಿ ಈ ಮತಾಂಧರನ್ನು ನಮ ಬ್ರದರ್‌ಸಗಳು ಎಂದು ಕರೆಯುತ್ತಾರೆ. ನಾವು ಏನೇ ಮಾಡಿದರೂ ಸರ್ಕಾರ ಕಾಪಾಡುತ್ತದೆ ಎಂಬ ಮಾನಸಿಕ ಸ್ಥಿತಿಯಲ್ಲಿರುವ ಜಿಹಾದಿಗಳು ಗಣೇಶನ ಮೆರವಣಿಗೆ ಮೇಲೆ ಕಲ್ಲು ಎಸೆಯುತ್ತಾರೆ. ಇದಕ್ಕೆ ಸರ್ಕಾರದ ಕುಮಕ್ಕು ಇದೆ ಎಂದು ಪ್ರಮುಖರು ಆರೋಪಿಸಿದರು.

## ವಾಸದ ಸಣ್ಣ ಕಟ್ಟಡಗಳಿಗೆ ಓಸಿ ಪಡೆಯುವುದರಿಂದ ವಿನಾಯಿತಿ ನೀಡಿ ನಗರಾಭಿವೃದ್ಧಿ ಇಲಾಖೆ ಆದೇಶ

**ಬೆಂಗಳೂರು, ಸೆ.10–**ಗ್ರೇಟರ್ ಬೆಂಗಳೂರು ಪ್ರಾಧಿಕಾರ ವ್ಯಾಪ್ತಿಯಲ್ಲಿ 1200 ಚದರ ಅಡಿ ವಿಸ್ತೀರ್ಣದವರೆಗಿನ ನಿವೇಶನಗಳಲ್ಲಿ ನಕ್ಷೆ ಮಂಜೂರಾತಿ ಪಡೆದು ನಿರ್ಮಿಸುವ ನೆಲಮಹಡಿ ಸೇರಿದಂತೆ 2 ಅಂತಸ್ತು ಅಥವಾ ಸ್ಟಿಲ್ಟ್ ಮತ್ತು ಮೂರು ಅಂತಸ್ತಿನವರೆಗಿನ ವಾಸದ ಕಟ್ಟಡಗಳಿಗೆ ಸ್ವಾಧೀನಾನುಭವ ಪ್ರಮಾಣ ಪತ್ರ(ಓಸಿ) ಪಡೆಯುವುದರಿಂದ ವಿನಾಯಿತಿ ನೀಡಿ ನಗರಾಭಿವೃದ್ಧಿ ಇಲಾಖೆ ಆದೇಶ ಹೊರಡಿಸಿದೆ.

ಗ್ರೇಟರ್ ಬೆಂಗಳೂರು ಆಡಳಿತ ಅಧಿನಿಯಮ 2024ರ ಕಲಂ 241(7)ರಡಿಯಲ್ಲಿ ನಗರಾಭಿವೃದ್ಧಿ ಇಲಾಖೆ (ಜಿ.ಬಿ.ಎ. ಮತ್ತು ಬೆಂ.ನ.ಪಾ–1)ಯ ಅಧೀನ ಕಾರ್ಯದರ್ಶಿ ಲಕ್ಷ್ಮಿಸಾಗರ್ ಎನ್.ಕೆ. ಆದೇಶ ಹೊರಡಿಸಿದ್ದಾರೆ. ಈ ಅಧಿನಿಯಮದ ಅಧ್ಯಾಯ 7ರ ನಿಬಂಧನೆಗಳನ್ವಯ ಕಟ್ಟಡ ಮತ್ತು ನಗರ ಯೋಜನಾ ನಿಯಮಗಳ ನಿಯಂತ್ರಣ ಮತ್ತು ಮೇಲ್ವಿಚಾರಣೆಗಳನ್ನು ಕಾರ್ಯಗತಗೊಳಿಸಲು ಲಭ್ಯವಿರುವ ಕಾರ್ಯಪಡೆಯೊಂದಿಗೆ ದೃಢವಾದ ಆಡಳಿತ ರಚನೆಯನ್ನು ವಿನ್ಯಾಸಗೊಳಿಸುವಂತೆ ಜಿ.ಬಿ.ಎ. ಮುಖ್ಯ ಆಯುಕ್ತರಿಗೆ ಆದೇಶ ದಲ್ಲಿ ನಿರ್ದೇಶನ ನೀಡಲಾಗಿದೆ.

ಜಿ.ಬಿ.ಎ. ಮುಖ್ಯ ಆಯುಕ್ತರು ಸಲ್ಲಿಸಿದ್ದ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಜಿ.ಬಿ.ಎ.ವ್ಯಾಪ್ತಿಯ ಸಣ್ಣ ಪ್ರಮಾಣದ ಕಟ್ಟಡಗಳಿಗೆ ಸ್ವಾಧೀನಾನುಭವ ಪ್ರಮಾಣ ಪತ್ರ ಪಡೆಯಲು ಸಾರ್ವಜನಿಕರಿಗೆ ವಿನಾಯಿತಿ ನೀಡುವುದರಿಂದ ಸಾರ್ವಜನಿಕರಿಗೆ ಸಕಾಲದಲ್ಲಿ ಸೇವೆ ಒದಗಿಸಲು ಸಹಕಾರಿಯಾದಂತಾಗುತ್ತದೆ ಎಂಬುದನ್ನು ಸರ್ಕಾರ ಮನಗಂಡು ಈ ಆದೇಶ ಹೊರಡಿಸಲಾಗಿದೆ ಎಂದು ಹೇಳಲಾಗಿದೆ. ಸ್ವಾಧೀನಾನುಭವ ಪ್ರಮಾಣ




ಪತ್ರ ನೀಡುವ ಪ್ರಕ್ರಿಯೆಯು ಸ್ಥಳ ಪರಿಶೀಲನೆ, ನಿರ್ಮಾಣ ಮಾಡಿರುವ ಕಟ್ಟಡ ಹಾಗೂ ಅನುಮೋದಿತ ಕಟ್ಟಡ ನಕ್ಷೆಯ ತುಲನಾತಕ ಪರಿಶೀಲನೆ ಮುಂತಾದವುಗಳನ್ನು ಒಳಗೊಂಡಿರುವುದರಿಂದ ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳಿಗೆ ಹೆಚ್ಚಿನ ಕೆಲಸದ ಹೊರೆ ಉಂಟಾಗುತ್ತಿದೆ.

ಇದರಿಂದ ಸಾರ್ವಜನಿಕರಿಗೆ ಸೇವೆ ನೀಡುವಲ್ಲಿ ವಿಳಂಬವಾಗುವ ಸಾಧ್ಯತೆಗಳಿದ್ದು, ಸಾರ್ವಜನಿಕರ ಅನುಕೂಲವನ್ನು ಗಮನದಲ್ಲಿರಿಸಿಕೊಂಡು ಹಾಗೂ ನಂಬಿಕೆ ನಕ್ಷೆ ವ್ಯವಸ್ಥೆಯಲ್ಲಿ ಶೀಘ್ರವಾಗಿ ನಕ್ಷೆಗಳಿಗೆ ಮಂಜೂರಾತಿ ನೀಡಲಾಗುತ್ತಿದೆ. ಇದನ್ನು ಗಮನದಲ್ಲಿರಿಸಿಕೊಂಡು ಸಣ್ಣ ಪ್ರಮಾಣದ ಕಟ್ಟಡಗಳಿಗೆ ಸ್ವಾಧೀನಾನುಭವ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಪಡೆಯುವುದರಿಂದ ವಿನಾಯಿತಿ ನೀಡುವುದು ಸೂಕ್ತ ಎಂದು ಪರಿಗಣಿಸಿ ಈ ಆದೇಶ ಹೊರಡಿಸಲಾಗಿದೆ.

## ಸೈಬರ್ ಅಪರಾಧಗಳಿಗೆ ವಿದ್ಯಾವಂತರೇ ಬಲಿ

**ಜೇವರ್ಗಿ: ಸೆ.10–**ಸಾಮಾಜಿಕ ಜಾಲತಾಣಗಳ ವಂಚನೆ ಲ್ಲಿ ಅಪರಿಚಿತರೊಂದಿಗೆ ಬ್ಯಾಂಕ್ ಖಾತೆ ಸೇರಿದಂತೆ ಇತರೆ ವೈಯುಕ್ತಿಕ ಮಾಹಿತಿ ಹಂಚಿಕೊಳ್ಳುವುದರಿಂದ ಪ್ರಕರಣಗಳಾಗುತ್ತವೆ. ಹೀಗೆ ವಂಚನೆ ಒಳಗಾಗುವವರ ಪೈಕಿ ಯುವಕರು ಮತ್ತು ವಿದ್ಯಾವಂತರು ಹೆಚ್ಚು' ಎಂದು ಎಂದು ಜೇವರ್ಗಿ ಸರ್ಕಲ್ ಇನ್‌ಸ್ಪೆಕ್ಟರ್ ರಾಜೇಸಾಬ ನದಾಫ್ ಹೇಳಿದರು.

ಪಟ್ಟಣದ ದತ್ತನಗರ ಬಡಾವಣೆಯಲ್ಲಿ ವೀರ ಸಾವರ್ಕರ್ ಗಣೇಶ ಮಿತ್ರ ಮಂಡಳಿ ವತಿಯಿಂದ ಆಯೋಜಿಸಲಾಗಿದ್ದ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಉದ್ಯೋಗ, ವೈವಾಹಿಕ ಸಂಬಂಧ ನೆಪದಲ್ಲಿ ಪರಿಚಯಿಸಿಕೊಂಡು ಫೊ?ಟೋ, ವೀಡಿಯೋ ಪಡೆಯುತ್ತಾರೆ. ನಂತರ ಎಡಿಟ್ ಮಾಡಿ ಬ್ಲಾಕ್‌ಮೇಲ್ ಮಾಡುವ ಪ್ರಕರಣಗಳು ಹೆಚ್ಚಿವೆ. ಸೈಬರ್ ಕಳ್ಳರು ಬೇರೆ ರಾಜ್ಯ ಅಥವಾ ವಿದೇಶದಲ್ಲಿ ಕುಳಿತು ಕೇವಲ ಮೊಬೈಲ್ ನಂಬರ್, ಕ್ರೆಡಿಟ್, ಡೆಬಿಟ್ ಕಾರ್ಡ್ ಮಾಹಿತಿ ಪಡೆದು ಖಾತೆ ಬರಿದಾಗಿಸುತ್ತಿದ್ದಾರೆ' ಎಂದರು'ಇಂಗ್ಲಿಷ್, ಹಿಂದಿ ಭಾಷೆ ಬಲ್ಲ ವಿದ್ಯಾವಂತರು ಸೈಬರ್ ಅಪರಾಧಗಳಿಗೆ ಹೆಚ್ಚಾಗಿ ಬಲಿಯಾಗುತ್ತಿದ್ದಾರೆ. ಬರೀ ಕನ್ನಡ ಭಾಷೆ ಗೊತ್ತಿರುವರಿಗೆ ಯಾವುದೇ ಜೇವರ್ಗಿ ಪಟ್ಟಣದ ವೀರ ಸಾವರ್ಕರ್ ಗಣೇಶ ಮಂಡಳಿಯಿಂದ

ಆಯೋಜಿಸಲಾಗಿದ್ದ ಸಾಂಸ್ಕೃತಿಕ ಕಾರ್ಯಕ್ರಮವನ್ನು ಜಿಪಂ ಮಾಜಿ ಅಧ್ಯಕ್ಷ ನಿತೀನ್ ಗುತ್ತೇದಾರ ಉದ್ಘಾಟಿಸಿದರು. ಸೊನ್ನದ ಶಿವಾನಂದ ಸ್ವಾಮೀಜಿ, ರಾಜಶೇಖರ ಸಾಹು ಸೀರಿ, ಶಂಕರಗೌಡ ಬಿದನೂರ ಮತ್ತಿತರಿದ್ದರು

ಕಾರಣಕ್ಕೂ ಅಪರಾಧಿಗಳು ಮೋಸ ಮಾಡಲು ಸಾಧ್ಯವಿಲ್ಲ. ಯುವಕರು, ಮಹಿಳೆಯರು, ಮಕ್ಕಳು ಮೊಬೈಲ್ ಗೀಳಿಂದ ಹೊರಬರಬೇಕು' ಎಂದು ಸಲಹೆ ನೀಡಿದರು.ಇದಕ್ಕೂ ಮುನ್ನ



ಜಿಪಂ ಮಾಜಿ ಅಧ್ಯಕ್ಷ ನಿತೀನ್ ಗುತ್ತೇದಾರ ಉದ್ಘಾಟಿಸಿ ಮಾತನಾಡಿದರು.

ಸೊನ್ನದ ಶಿವಾನಂದ ಸ್ವಾಮೀಜಿ ಸಾನ್ನಿದ್ಯ ವಹಿಸಿದ್ದರು. ವೀರಶೈವ ಮಹಾಸಭಾ ರಾಜ್ಯ ಕಾರ್ಯದರ್ಶಿ ರಾಜಶೇಖರ ಸಾಹು ಸೀರಿ ಅಧ್ಯಕ್ಷತೆ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಪ್ರಮುಖರಾದ ಮಹಾಂತಯ್ಯ ಹಿರೇಮಠ, ಮಹಿಮೂದ್ ಪಟೇಲ ಜೇವರ್ಗಿ.ಕೆ, ಸಂಜಯ ಪವಾರ, ಅಂಬರೀಶ್ ಪತಂಗೆ, ಪ್ರಕಾಶ ಪವಾರ,

ದ್ಯಾಮಗೊಂಡ, ಸೂರ್ಯಕಾಂತ ಹಣಮಂತ್ರಾಯಗೌಡ ಗುಡೂರ, ಶಿವಲಿಂಗ ಹಳ್ಳಿ ಸೊನ್ನ, ಸುರೇಶ ಪಾಟೀಲ ನೇದಲಗಿ, ಅಖಂಡು ಶಿವಣ್ಣಿ, ಸಂಗಾರೆಡ್ಡಿ ಮಲ್ಲಾ, ಸಮಿತಿಯ ಗೌರವಾಧ್ಯಕ್ಷ ಶಂಕರಗೌಡ ಬಿದನೂರ, ಅಧ್ಯಕ್ಷ ಗುರು ರಾವೂರ, ಸಂಚಾಲಕ ವಿಶಾಲ ಪವಾರ, ಉಮಾಶಂಕರ ಸ್ಥಾವರಮಠ, ಶ್ರೀಶೈಲಗೌಡ ಕರಕಿಹಳ್ಳಿ, ಲಗಮಣ್ಣ ಪೂಜಾರಿ, ಅಶೋಕ ಪೂಜಾರಿ, ಬಸವರಾಜ ಮಂದರವಾಡ, ಗೌಡಪ್ಪಗೌಡ ವಾರದ ಸೇರಿದಂತೆ ಹಲವಾರು ಜನ ಭಾಗವಹಿಸಿದ್ದರು. ನಂತರ ವಿವಿಧ ಕಲಾವಿದರಿಂದ ಹಾಸ್ಯ ರಸಮಂಜರಿ ಕಾರ್ಯಕ್ರಮ ಜರುಗಿತು. ಮಹಾಂತೇಶ ಹೂಗಾರ ನಿರೂಪಿಸಿ ವಂದಿಸಿದರು.

# ಛಾಯಾಚಿತ್ರಗಳು ಜೀವನದ ಪ್ರತಿಬಿಂಬ

**ಧಾರವಾಡ,ಸೆ10–** ಛಾಯಾಚಿತ್ರಗಳು ಕೇವಲ ಚಿತ್ರಗಳಲ್ಲ, ಅವು ಜೀವನದ ನಿಜವಾದ ಕ್ಷಣಗಳನ್ನು, ಭಾವನೆಗಳನ್ನು ಮತ್ತು ಸಮಾಜದ ಹೃದಯಸ್ಪಂದನವನ್ನು ಸೆರೆ ಹಿಡಿಯುವ ಸಾಧನಗಳಾಗಿವೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಹೇಳಿದರು.

ಅವರು ವಾರ್ತಾ ಇಲಾಖೆಯ ವಾರ್ತಾಭವನದಲ್ಲಿ ಸೆ.15 ರ ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಹಿನ್ನಲೆಯಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಸಮಾಜ ಕಲ್ಯಾಣ ಇಲಾಖೆ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಂಯುಕ್ತ ಆಶ್ರಯದಲ್ಲಿ ಛಾಯಾಗ್ರಾಹಕರಿಗೆ ಮತ್ತು ವಿದ್ಯಾರ್ಥಿಗಳಿಗೆ ಆಯೋಜಿಸಿದ್ದ ಪ್ರಜಾಪ್ರಭುತ್ವ ಕುರಿತ ಛಾಯಾಚಿತ್ರ ಸ್ಪರ್ಧೆ ಮತ್ತು ಪ್ರದರ್ಶನ ಕಾರ್ಯಕ್ರಮ ಉದ್ಘಾಟಿಸಿ, ಮಾತನಾಡಿದರು.

ಪ್ರಜಾಪ್ರಭುತ್ವದ ಆಶಯಗಳನ್ನು ಎತ್ತಿಹಿಡಿಯುವಲ್ಲಿ ಛಾಯಾಚಿತ್ರಗಳು ಪ್ರಮುಖ ಪಾತ್ರವಹಿಸುತ್ತವೆ. ದೃಶ್ಯ ಮಾಧ್ಯಮದ ಮೂಲಕ ಪ್ರಜಾಪ್ರಭುತ್ವದ ಮೌಲ್ಯಗಳನ್ನು ಜನರಿಗೆ ತಲುಪಿಸಲು ಇಂತಹ ಸ್ಪರ್ಧೆಗಳು ಸಹಕಾರಿಯಾಗಿವೆ ಎಂದು ತಿಳಿಸಿದರು.

ಸ್ಪರ್ಧೆಯು ಸ್ಥಳೀಯ ಛಾಯಾಗ್ರಾಹಕರಿಗೆ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಲು ಉತ್ತಮ ವೇದಿಕೆಯಾಗಿದೆ ಎಂದು ಅವರು ಹೇಳಿದರು.ಹಿಂದಿನ ದಿನಗಳಲ್ಲಿ ಛಾಯಾಚಿತ್ರಗಳ ಪ್ರದರ್ಶನದ ಸ್ಪರ್ಧೆಯನ್ನು ಸಾಮಾನ್ಯವಾಗಿ ಶಾಲಾ–ಕಾಲೇಜು ವಿದ್ಯಾರ್ಥಿಗಳ ಮಟ್ಟಕ್ಕೆ ಮಾತ್ರ ಸೀಮಿತವಾಗಿತ್ತು. ಆದರೆ ಈ ಬಾರಿ ಸಾರ್ವಜನಿಕರಿಂದಲೂ ಅತೀ ಉತ್ತಮ ಸ್ಪಂದನೆ ದೊರೆತಿದೆ. ಛಾಯಾಚಿತ್ರಗಳನ್ನು ತೆಗೆಯುವ ಮೂಲಕ ತಮ್ಮ ಅನುಭವ ಮತ್ತು ಸೃಜನಶೀಲತೆಯನ್ನು ಅವರು ಹಂಚಿಕೊಂಡಿದ್ದು ನೋಡಿದರೆ ಈ ಪ್ರದರ್ಶನ ಒಂದು ಸಮಾಜದ ಸಂವೇದನೆಗಳ ನಿಜವಾದ ಪ್ರತಿಬಿಂಬವಾಗಿದೆ ಎಂದು ಹೇಳಿದರು.

ಮೊದಲಿನ ದಿನಗಳಲ್ಲಿ ಛಾಯಾಚಿತ್ರ ತೆಗೆದುಕೊಳ್ಳುವುದು ಸುಲಭವಾಗಿರಲಿಲ್ಲ. ಆ ಸಮಯದಲ್ಲಿ ಕ್ಯಾಮೆರಾ ಸಾಧನಗಳು ಅಪರೂಪವಾಗಿದ್ದವು. ವಿಶೇಷ ಸಂದರ್ಭಗಳಲ್ಲಿ ಮಾತ್ರ ಛಾಯಾಚಿತ್ರೀಕರನ್ನು ಕರೆಸಿಕೊಳ್ಳಲಾಗುತ್ತಿತ್ತು. ಅವರು ತೆಗೆದ ಚಿತ್ರಗಳು ನಮ್ಮ ಜೀವನದ ನೆನಪುಗಳಾಗುತ್ತಿದ್ದವು. ಆದರೆ ಕಾಲ ಬದಲಾದಂತೆ ತಂತ್ರಜ್ಞಾನ ಬೆಳೆದಿತ್ತು. ಡಿಜಿಟಲ್ ಕ್ಯಾಮೆರಾಗಳು ಮತ್ತು ಸ್ಮಾರ್ಟ್‌ಫೋಪ್‌ಗಳ ಪ್ರಚಾರ ಹೆಚ್ಚಾದ ಕಾರಣ ಇಂದು ಪ್ರತಿಯೊಬ್ಬರೂ ಛಾಯಾಗ್ರಾಹಕರಾಗಿದ್ದಾರೆ.

ಮದುವೆ, ಹುಟ್ಟುಹಬ್ಬ, ಹಬ್ಬ ಹರಿದಿನಗಳು, ಜಾತ್ರೆ, ಪ್ರವಾಸದ ಸಂದರ್ಭವಾಗಲಿ, ಎಲ್ಲರೂ ತಮ್ಮ ಮೊಬೈಲ್‌ಗಳಲ್ಲಿ ಚಿತ್ರ ಮತ್ತು ವೀಡಿಯೊಗಳನ್ನು ಸೆರೆಹಿಡಿಯುತ್ತಿದ್ದಾರೆ. ಈ ಪರಿವರ್ತನೆಯೇ ಛಾಯಾಚಿತ್ರ ಕಲೆಯನ್ನು ಇನ್ನಷ್ಟು ಸಾಮಾನ್ಯಗೊಳಿಸಿದೆ. ಪ್ರತಿಯೊಂದು ಫೋಟೋದಲ್ಲಿಯೂ ಒಂದು ಕಥೆ ಅಡಗಿದೆ, ಆ ಎಲ್ಲ ಫೋಟೊಗಳು ನೆನಪುಗಳನ್ನು ಬಿಚ್ಚಿಡುತ್ತವೆ ಎಂದು ಜಿಲ್ಲಾಧಿಕಾರಿ ಹೇಳಿದರು.

ಇಂದಿನ ಛಾಯಾಗ್ರಹಣವು ತಂತ್ರಜ್ಞಾನದ ಅಬ್ಬರದಿಂದ ಸಂಪೂರ್ಣವಾಗಿ ಬದಲಾಗಿದೆ. ಡಿಜಿಟಲ್ ಕ್ಯಾಮರಾಗಳು, ಸ್ಮಾರ್ಟ್‌ಫೋಪ್‌ಗಳು, ಡ್ರೋನ್‌ಗಳು ಛಾಯಾಗ್ರಹಣವನ್ನು ಪ್ರತಿಯೊಬ್ಬರಿಗೂ ಸುಲಭವಾಗಿ ತಲುಪಿಸಿವೆ. ಈಗ ಒಂದು ಸೆಕೆಂಡಿಗೆ ನೂರಾರು ಚಿತ್ರಗಳನ್ನು ತೆಗೆಯಬಹುದು, ಅವುಗಳನ್ನು ತಕ್ಷಣವೇ ಪರಿಶೀಲಿಸಬಹುದು, ಸಂಪಾದಿಸಬಹುದು ಮತ್ತು ಸಾಮಾಜಿಕ ಜಾಲತಾಣಗಳಲ್ಲಿ ಹಂಚಿಕೊಳ್ಳಬಹುದು.



ಛಾಯಾಗ್ರಹಣವು ಕೇವಲ ನೆನಪುಗಳನ್ನು ಸೆರೆಹಿಡಿಯುವ ಸಾಧನವಾಗಿ ಉಳಿದಿಲ್ಲ, ಅದೊಂದು ಸಂವಹನ ಮಾಧ್ಯಮವಾಗಿದೆ ಎಂದು ಹೇಳಿದರು.ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕಿ ಪಿ. ಶುಭ ಅವರು ಮಾತನಾಡಿ, ಫೊ?ಟೋಗ್ರಾಫಿ ಕೇವಲ ದೃಶ್ಯವಲ್ಲ, ಅದೊಂದು ಅನುಭವ, ನಿಮ್ಮ ಕ್ಯಾಮೆರಾ ಕೇವಲ ಒಂದು ಉಪಕರಣವಲ್ಲ, ಅದು ನಿಮ್ಮ ಕಣ್ಣುಗಳು ಮತ್ತು ಆತ್ಮದ ವಿಸ್ತರಣೆ. ನೀವು ಏನು ನೋಡುತ್ತೀರಿ ಎಂಬುದಕ್ಕಿಂತ ಹೆಚ್ಚಾಗಿ, ನೀವು ಏನು ಅನುಭವಿಸುತ್ತೀರಿ ಎಂಬುದನ್ನು ಸೆರೆಹಿಡಿಯಲು ಪ್ರಯತ್ನಿಸುತ್ತಿರಿ ಎಂದು ಛಾಯಾಗ್ರಾಹಕರ ಬಗ್ಗೆ ಹೇಳಿದರು.

ಇಂದಿನ ಡಿಜಿಟಲ್ ಯುಗದಲ್ಲಿ, ಯಾರಾದರೂ ಸುಲಭವಾಗಿ ಫೊ?ಟೋ ತೆಗೆಯಬಹುದು. ಆದರೆ, ನಿಜವಾದ ಕಲಾಕೃತಿ ಹೊರಹೊಮ್ಮುವುದು ಭಾವನೆಗಳು ಮತ್ತು ಆಲೋಚನೆಗಳ ಸಂಯೋಜನೆಯಿಂದ ಎಂದು ತಿಳಿಸಿದರು.

ಯುವ ಮಾರ್ಗ

ಗುರುವಾರ : 11–09–2025

## ಎಲೆ ಬಿಚ್ಚಲಿ ವಿದ್ಯಾರ್ಥಿಗಳು ಕೊಕ್ಕೊದಲ್ಲಿ ಜಿಲ್ಲಾ ಮಟ್ಟಕ್ಕೆ ಆಯ್ಕೆ



**ಯುವ ಮಾರ್ಗ ಸುದ್ದಿ**

**ರಾಯಚೂರು,ಸೆ.10**–2025–26ನೇ ಸಾಲಿನ ಶಿಕ್ಷಣ ಇಲಾಖೆ ವತಿಯಿಂದ ಆಯೋಜಿಸಲಾಗಿದ್ದ ವಲಯ ಮಟ್ಟದ ಮತ್ತು ತಾಲೂಕು ಮಟ್ಟದ ಕ್ರೀಡಾಕೂಟಗಳಲ್ಲಿ, ಎಲೆ ಬಿಚ್ಚಲಿ ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿಗಳು ಅತ್ಯುತ್ತಮ ಸಾಧನೆ ಮಾಡಿದ್ದಾರೆ.

ಶಾಲೆಯ 9 ಮತ್ತು 10ನೇ ತರಗತಿಯ ವಿದ್ಯಾರ್ಥಿಗಳು ಕೊಕ್ಕೊ ಕ್ರೀಡೆಯಲ್ಲಿ ಭಾಗವಹಿಸಿ, ವಲಯ ಮಟ್ಟದಲ್ಲಿ ಮತ್ತು ತಾಲೂಕು ಮಟ್ಟದಲ್ಲಿ ಪ್ರಥಮ ಸ್ಥಾನ ಗಳಿಸುವ ಮೂಲಕ ವಿಜಯಶಾಲಿಯಾಗಿದ್ದಾರೆ. ಈ ಸಾಧನೆಯಿಂದಾಗಿ, ವಿದ್ಯಾರ್ಥಿಗಳು ಇದೀಗ ಜಿಲ್ಲಾ ಮಟ್ಟದ ಸ್ಪರ್ಧೆಗೆ ಆಯ್ಕೆಯಾಗಿದ್ದಾರೆ.

ವಿದ್ಯಾರ್ಥಿಗಳ ಈ ಸಾಧನೆಗೆ ಶಾಲೆಯ ಪ್ರಭಾರಿ ಮುಖ್ಯ ಶಿಕ್ಷಕಿ ಊರ್ಮಿಳಾ ಜಿ.ಎಸ್, ಶಿಕ್ಷಕರಾದ ಪ್ರಕಾಶ್, ಬಸಪ್ಪ (ಚಿತ್ರಕಲಾ ಶಿಕ್ಷಕರು), ಗ್ರಾಮ ಪಂಚಾಯತ್ ಅಧ್ಯಕ್ಷೆ ಮುದ್ದಮ್ಮ ಗಂಡ ಜಯಪ್ಪ, ಗ್ರಾಮ ಪಂಚಾಯತ್ ಸದಸ್ಯರು, ಊರಿನ ಗಣ್ಯರು, ಶಿಕ್ಷಣ ಪ್ರೇಮಿಗಳು ಹಾಗೂ ಪಾಲಕ–ಪೋಷಕರು ಸಂತಸ ವ್ಯಕ್ತಪಡಿಸಿ, ವಿದ್ಯಾರ್ಥಿಗಳಿಗೆ ಅಭಿನಂದನೆ ಸಲ್ಲಿಸಿದ್ದಾರೆ.

## ಸಿರವಾರ: ಡಿಜೆ ಎಫೆಕ್ಟ್ ಹೃದಯಾಘಾತದಿಂದ ಯುವಕ ಸಾವು



**ಯುವ ಮಾರ್ಗ ಸುದ್ದಿ**

**ಸಿರವಾರ, ಸೆ.10**–ಗಣೇಶನ ವಿಸರ್ಜನೆಗಾಗಿ ಮೆರವಣಿಗೆಯಲ್ಲಿ ಡಿಜೆ ಸೌಂಡ್ ಎಫೆಕ್ಟ್ ನಿಂದಾಗಿ 30 ವರ್ಷದ ಯುವಕ ಹೃದಯಾಘಾತದಿಂದ ಮೃತಪಟ್ಟ ಘಟನೆ ಸಿರವಾರ ಪಟ್ಟಣದಲ್ಲಿ ಮಂಗಳವಾರ ಬೆಳಗಿನ ಜಾವ ಜರುಗಿದೆ.

ಮೃತ ಯುವಕ ಹನುಮೇಶ ಕಟ್ಟಿಮನಿ (ಬೋಟಾ) ಈತ ಸೋಮವಾರ ರಾತ್ರಿಯಿಂದ ತಮ್ಮ 15ನೇ ವಾರ್ಡಿನಲ್ಲಿ ಪ್ರತಿಷ್ಠಾನೆ ಮಾಡಲಾಗಿದ್ದ ಗಣೇಶನ ವಿಸರ್ಜನೆಗಾಗಿ ಡಿಜೆ ಹಚ್ಚಲಾಗಿತ್ತು ರಾತ್ರಿ ಇಡೀ ಡಿಜೆ ಸೌಂಡಗೆ ಡ್ಯಾನ್ಸ್ ಮಾಡುತ್ತಿದ್ದ ಇನ್ನೂ ಗಣೇಶನ ವಿಸರ್ಜನೆಯಾಗಿರಲಿಲ್ಲ ಈ ಯುವಕ ಬೆಳಗಿನ ಜಾವ 6 ಗಂಟೆಗೆ ಮನೆಗೆ ಹೋಗಿ ಮಲಗಿದ್ದು ಹೃದಯಾಘಾತ ಸಂಭವಿಸಿ ಮೃತಪಟ್ಟಿದ್ದಾನೆ ಎಂದು ಕುಟುಂಬ ಮೂಲಗಳಿಂದ ತಿಳಿದು ಬಂದಿದೆ.

ಪಟ್ಟಣದಲ್ಲಿ ಎಲ್ಲಾರಿಗೂ ಆತ್ಮೀಯತೆಯಿಂದ ಇದ್ದ ಹನುಮೇಶ ಕಟ್ಟಿಮನಿ ಅವರು ಹಠಾತ್ ಹೃದಯಾಘಾತದಿಂದ ನಿಧನರಾದ ಸುದ್ದಿ ತಿಳಿಯುತ್ತದ್ದಂತೆ ಪಟ್ಟಣದ ಜನರು ಅಚ್ಚರಿಗೊಂಡಿದ್ದಾರೆ ಮೃತ ಹನುಮೇಶ ಕಟ್ಟಿಮನಿ ಅವರಿಗೆ ಮದುವೆಯಾಗಿ 3 ವರ್ಷಗಳು ಕಳೆದಿದ್ದು ಇಬ್ಬರು ಮಕ್ಕಳಿದ್ದಾರೆ ಎರಡನೇ ಮಗು ಜನಿಸಿ ಕೇವಲ ಎರಡು ತಿಂಗಳು ಆಗಿದೆ ಇದರಿಂದ ಕುಟುಂಬಸ್ಥರ ರೋಧನೆ ಮುಗಿಲು ಮುಟ್ಟಿತ್ತು.

## ಮೂಖ ಬಾಲಕನ ಪೋಷಕರ ಪತ್ತೆಗೆ ಮನವಿ



**ರಾಯಚೂರು,ಸೆ.10**–ಅಂದಾಜು 15 ವರ್ಷ ವಯೋಮಾನದ ವಿಕ್ರಮ ಎಂಬ ಮೂಖ ಬಾಲಕನನ್ನು ಸೆಪ್ಟೆಂಬರ್ 08 ರಂದು ಇಲ್ಲಿನ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸರ್ಕಾರಿ ಬಾಲಕರ ಬಾಲಮಂದಿರದಲ್ಲಿ ದಾಖಲಿಸಲಾಗಿದ್ದು, ಈತನ ಪೋಷಕರ ಪತ್ತೆಗೆ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ರಕ್ಷಣಾಧಿಕಾರಿಗಳು ಕೋರಿದ್ದಾರೆ.

ಬಾಲಕನು ಮುಖನಾಗಿರುವುದರಿಂದ ಪೋಷಕರ ಬಗ್ಗೆ ಮಾಹಿತಿ ಸರಿಯಾಗಿ ನೀಡುತ್ತಿಲ್ಲ. ಕೇವಲ ತನ್ನ ಹೆಸರನ್ನು ಇಂಗ್ಲೀಷನಲ್ಲಿ ಬರೆದು ತೋರಿಸುತ್ತಿದ್ದಾನೆ. ಬಾಲಕನು 164 ಎತ್ತರ, ಸಾದಾ ಬಿಳಿ ಮೈಬಣ್ಣ, ಕೋಲು ಮುಖ, ಸಾಧಾರಣ ಮೈಕಟ್ಟು, ಗುಂಗುರು ಕೂದಲು ಹೊಂದಿದ್ದಾನೆ.

ಈ ಬಾಲಕನ ಪೋಷಕರು ಪತ್ತೆಯಾದಲ್ಲಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕ 1–9–138, ಮಾರೆಮ್ಮ ದೇವಸ್ಥಾನ ಹತ್ತಿರ,

ಆಜಾದ ನಗರ, ರಾಯಚೂರು–584101. ಮೊಬೈಲ್ ಸಂಖ್ಯೆ: 9663752133 ಅಥವಾ ಅಧೀಕ್ಷಕರು, ಸರ್ಕಾರಿ ಬಾಲಕರ ಬಾಲಮಂದಿರ ರೆಹಮಾತ್ ಮನ್ ಸಿನ್ 1–4–157/105 ಅಮರೇಶ್ವರ ಕಾಲೋನಿ, ಆದಿತಿ ಆಸ್ಪತ್ರೆ ಎದುರುಗಡೆ ಆಶಾಪೂರ ರಸ್ತೆ, ರಾಯಚೂರು ಮೊಬೈಲ್ ಸಂಖ್ಯೆ: 9880957574ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗುಂಜಳ್ಳಿ ಪ್ರೌಢಶಾಲೆಯಲ್ಲಿ ಮಿಷನ್ ಶಕ್ತಿ ಯೋಜನೆಯ ಜಾಗೃತಿ ಅಭಿಯಾನ

**ಯುವ ಮಾರ್ಗ ಸುದ್ದಿ**

**ರಾಯಚೂರು,ಸೆ.10**– ರಾಯಚೂರು ತಾಲೂಕಿನ ಗುಂಜಳ್ಳಿ ಪ್ರೌಢಶಾಲೆಯಲ್ಲಿ ಸೆಪ್ಟೆಂಬರ್ 9ರಂದು ಮಿಷನ್ ಶಕ್ತಿ ಯೋಜನೆಯ 10 ದಿನಗಳ ವಿಶೇಷ ಜಾಗೃತಿ ಅಭಿಯಾನ ಕಾರ್ಯಕ್ರಮ ನಡೆಯಿತು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶಿಕ್ಷಣ ಇಲಾಖೆ, ಜಿಲ್ಲಾ ಮಹಿಳಾ ಸಬಲೀಕರಣ ಘಟಕದಿಂದ ವಿದ್ಯಾರ್ಥಿನಿಯರಿಗೆ ನಡೆದ ಜಾಗೃತಿ ಕಾರ್ಯಕ್ರಮವನ್ನು ಜಿಲ್ಲಾ ಮಹಿಳಾ ಸಬಲೀಕರಣ ಘಟಕದ ತಜ್ಞ ಗಿರಿಜಾ ಉದ್ಘಾಟಿಸಿದರು.

ಬಾಲಕಿಯರಿಗೆ ವೈಯಕ್ತಿಕ ಶುಚಿತ್ವ, ಸ್ನೇಹ ಕ್ಲಿನಿಕ್, 1098 ಮಕ್ಕಳ ಸಹಾಯವಾಣಿ, ಬಾಲ್ಯವಿವಾಹ ನಿಷೇಧ ಕಾಯ್ದೆ, ಬಾಲ ಕಾರ್ಮಿಕ ನಿಷೇಧ ಕಾಯ್ದೆ ಹಾಗೂ ಮೊಬೈಲ್ ಬಳಕೆಯ ದುಷ್ಪರಿಣಾಮದ ಕುರಿತು ಕಾರ್ಯಕ್ರಮದಲ್ಲಿ ಮಾಹಿತಿ ನೀಡಲಾಯಿತು.



ಬಾಲಕಿಯರು ಗರ್ಭಿಣಿಯರಾಗುತ್ತಿರುವ ವಿಷಯ, ದುಷ್ಪರಿಣಾಮಗಳ ಬಗ್ಗೆ ವಿದ್ಯಾರ್ಥಿನಿಯರಿಗೆ ತಿಳಿಸಲಾಯಿತು.

ಕಾರ್ಯಕ್ರಮದಲ್ಲಿ ಶಾಲಾ ಮುಖ್ಯ ಗುರುಗಳಾದ ಅನುಸೂಯ, ಸಹ ಶಿಕ್ಷಕರಾದ ಎಂ ಶಾರದಾ, ಪೂರ್ಣಿಮಾ, ಮಹಿಳಾ ಸಬಲೀಕರಣ ಘಟಕದ ವಿಜಯಲಕ್ಷ್ಮಿ ಭಾಗವಹಿಸಿದ್ದರು.

# ಮಹತ್ವಕಾಂಕ್ಷಿ ಯೋಜನೆ ಜ್ಞಾನಸೇತು ಕಾರ್ಯಕ್ರಮಕ್ಕೆ ರಾಯಚೂರಿನಲ್ಲಿ ಚಾಲನೆ



**ಯುವ ಮಾರ್ಗ ಸುದ್ದಿ**

**ರಾಯಚೂರು,ಸೆ.10**– ನಗರದ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಕರ್ನಾಟಕ ಸರ್ಕಾರದ ಮಹತ್ವಕಾಂಕ್ಷಿ ಯೋಜನೆ ಜ್ಞಾನಸೇತು ಕಾರ್ಯಕ್ರಮಕ್ಕೆ ಯರಮರಸ್ ಡಯಟ್ ಪ್ರಾಚಾರ್ಯರಾದ ಚಂದ್ರಶೇಖರ್ ಭಂಡಾರಿ ಅವರು ಇತ್ತೀಚೆಗೆ ಚಾಲನೆ ನೀಡಿದರು.


ಶಾಲಾ ಶಿಕ್ಷಣ ( ಪದವಿ ಪೂರ್ವ ) ರಾಯಚೂರು ಹಾಗೂ ಡಯಟ್ ಯರಮರಸ್ ಇವರ ಸಹಯೋಗದಲ್ಲಿ ಪದವಿ ಪೂರ್ವ ಉಪನ್ಯಾಸಕರಿಗೆ ನಡೆದ ಈ ಕಾರ್ಯಕ್ರಮದಲ್ಲಿ ಪಿಯುಸಿ ಪ್ರಥಮ ವರ್ಷ ಹಾಗೂ ದ್ವಿತೀಯ ವರ್ಷದ ಭೌತಶಾಸ್ತ್ರ ರಸಾಯನಶಾಸ್ತ್ರ, ಗಣಿತ, ಜೀವಶಾಸ್ತ್ರ, ಗಣಕ ವಿಜ್ಞಾನ, ಇಂಗ್ಲೀಷ್, ಅರ್ಥಶಾಸ್ತ್ರ ಈ ಏಳು ವಿಷಯಗಳ 150 ವಿಷಯ ಉಪನ್ಯಾಸಕರು ಹಾಜರಿದ್ದರು.

ಈ ವೇಳೆ ಚಂದ್ರಶೇಖರ್ ಭಂಡಾರಿ ಅವರು ಮಾತನಾಡಿ, ಜ್ಞಾನಸೇತು ಎನ್ನುವುದು ಅಂತಾರಾಷ್ಟ್ರೀಯ ಖ್ಯಾತಿಯ ತರಬೇತಿ ಸಂಸ್ಥೆ ಖಾನ್ ಅಕಾಡೆಮಿಯಿಂದ ಪಠ್ಯಕ್ರಮ ಆಧರಿತ ಕಠಿಣ ವಿಷಯಗಳಲ್ಲಿ ಡಿಜಿಟಲ್ ಕಲಿಕಾ ಮಾಧ್ಯಮ ಮೂಲಕ ವಿದ್ಯಾರ್ಥಿಗಳಿಗೆ ಹಾಗೂ ಉಪನ್ಯಾಸಕರಿಗೆ ಉಪಯುಕ್ತವಾಗಿದ್ದು, ಇದರ ಪ್ರಯೋಜನ ಪಡೆದು ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ಶ್ರಮಿಸಬೇಕು ಎಂದು ತಿಳಿಸಿದರು.ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಸೋಮಶೇಖರ ಹೊಕ್ರಾಣಿ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ಕಡ್ಡಾಯವಾಗಿ ಜ್ಞಾನಸೇತು ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಬೇಕು. ಯಾವುದೇ ರೀತಿಯ ಲೋಪ ಆಗದಂತೆ ಯಶಸ್ವಿಗೊಳಿಸಲು ಉಪನ್ಯಾಸಕರಿಗೆ ಸೂಚಿಸಿದರು.

ಜ್ಞಾನ ಸೇತು ಕಾರ್ಯಕ್ರಮದ ಜಿಲ್ಲಾ ನೋಡಲ್ ಅಧಿಕಾರಿಗಳು ಆಗಿರುವ ಡಯಟ್ ಯರಮರಸ್‌ನ ಉಪನ್ಯಾಸಕರಾದ ಸುಖದೇವ ಅವರು ಕಾರ್ಯಕ್ರಮದ ರೂಪರೇಷೆಗಳ ಬಗ್ಗೆ ತಿಳಿಸಿದರು. ಡಯಟ್ ಯರಮರಸ್‌ನ ಹಿರಿಯ ಉಪನ್ಯಾಸಕರಾದ ಮಲ್ಲಿಕಾ ರ್ಜುನ್ ಅವರು ಉಪನ್ಯಾಸಕರನ್ನುದ್ದೇಶಿಸಿ ಮಾರ್ಗದರ್ಶನ ನೀಡಿದರು. ಪದವಿ ಪೂರ್ವ ಶಿಕ್ಷಣ ಇಲಾಖೆಯ ಪ್ರಾಂಶುಪಾಲರು ಮತ್ತು ನೋಡಲ್ ಅಧಿಕಾರಿಗಳಾದ ಡಾ.ರವೀಂದ್ರ ಬಂಡಿ ಅವರು ಪ್ರಾಸ್ತಾವಿಕ ಮಾತನಾಡಿದರು.

ಹಿರಿಯ ಪ್ರಾಂಶುಪಾಲರಾದ ಡಾ.ಕುಂಟೆಪ್ಪ, ಗೌರಿಪುರ ಕಾಲೇಜಿನ ಪ್ರಾಂಶುಪಾಲರಾದ ಚನ್ನಬಸಪ್ಪ, ಸಂಪನ್ಮೂಲ ವ್ಯಕ್ತಿಗಳಾದ ಸಿದ್ದನಗೌಡ, ಲಕ್ಷ್ಮಣ್, ಶರಣಮ್ಮ, ಕವಿತಾ ಉಪಸ್ಥಿತರಿದ್ದರು. ಉಪನ್ಯಾಸಕರಾದ ರಾಮಕೃಷ್ಣ ಕೆ.ವಿ. ಸ್ವಾಗತಿಸಿದರು. ಉಪನ್ಯಾಸಕ ರಾಜಕುಮಾರ ಶೆಟ್ಟಿ ವಂದಿಸಿದರು.

# ಹಾವು ಕಡಿತದ ಬಗ್ಗೆ ಎಚ್ಚರಿಕೆವಹಿಸಿ: ರೈತರಿಗೆ ತಾಲೂಕು ಆರೋಗ್ಯ ಅಧಿಕಾರಿ ಡಾ.ಬನದೇಶ್ವರ



**ಯುವ ಮಾರ್ಗ ಸುದ್ದಿ**

’**ದೇವದುರ್ಗ,ಸೆ.10**–ಗ್ರಾಮೀಣ ಭಾಗದರೈತಾಪಿ ವರ್ಗ, ಕೂಲಿ ಕಾರರುಜನರು ಹಾವು ಕಡಿತದ ಬಗ್ಗೆ ಎಚ್ಚರಿಕೆವಹಿಸಬೇಕು. ವಿಷಕಾರಿಜಂತು ಕಚ್ಚಿದರೆ ತಕ್ಷಣವೇ ಸರ್ಕಾರಿ ಆಸ್ಪತ್ರೆಗೆ ಭೇಟಿನೀಡಿಚಿಕಿತ್ಸೆ ಪಡೆಯಬೇಕು ಎಂದು ತಾಲೂಕು ಆರೋಗ್ಯ ಅಧಿಕಾರಿಡಾ.ಬನದೇಶ್ವರ ಹೇಳಿದರು.

ತಾಲೂಕಿನಕರಿಗುಡ್ಡಗ್ರಾಮದಲ್ಲಿಜಿಲ್ಲಾಡಳಿತ, ಜಿಪಂ ಹಾಗೂ ಜಿಲ್ಲಾಆರೋಗ್ಯ ಮತ್ತುಕುಟುಂಬ ಕಲ್ಯಾಣಇಲಾಖೆಯಿಂದ ಆಯೋಜಿಸಿದ್ದ ಹಾವು ಕಡಿತಕುರಿತುಜಾಗೃತಿಕಾರ್ಯಕ್ರಮದಲ್ಲಿ ಮಂಗಳವಾರ ಮಾತನಾಡಿದರು. ಭಾರತದಲ್ಲಿ ಹಾವು ಕಡಿತದಿಂದಅತಿಹೆಚ್ಚುಜನರು ಮೃತಪಡುತ್ತಿದ್ದಾರೆ.ಪ್ರತಿಯೊಬ್ಬರೂ ಹಾವು ಕಡಿದಾಗಅನುಸರಿಸಬೇಕಾದ ಗ್ರಾಮಗಳ ಬಗ್ಗೆ ತಿಳಿದುಕೊಳ್ಳಬೇಕು.

ದೇಶದಲ್ಲಿನಾಲ್ಕು ಪ್ರಮುಖ ವಿಷಕಾರಿ ಹಾವುಗಳಿವೆ. ನಾಗರಹಾವು,ಕಟ್ಟಾವು, ಕೊಳಕುಮಂಡಲ,ಗರಗಸಮಂಡಲ ಹಾವು. ನಾಗರಹಾವು ಬಿಟ್ಟು ಉಳಿದ ಮೂರು ವಿಷಕಾರಿಯಾವುದುರಾತ್ರಿ ವೇಳೆ ಹೆಚ್ಚು ಚಟುವಟಿಕೆಯಿಂದಇರುತ್ತವೆ. ಹೀಗಾಗಿ ರಾತ್ರಿ ಹೊರಗೆ ಹೋಗುವಾಗಎಚ್ಚರಿಕೆವಹಿಸಬೇಕು.ವಿಷಕಾರಿ ಹಾವುಗಳು ಆಹಾರಕ್ಕಾಗಿ ರಾತ್ರಿವೇಳೆ ಎಲ್ಲೆಂದರಲ್ಲಿಓಡಾಡುತ್ತವೆ. ಹಾವು ಕಚ್ಚಿದರೆ ನಾಟಿಔಷಧ ಮೇಲೆ ಅವಲಂಬಿತರಾಗದೆ ವೈದ್ಯಕೀಯಚಿಕಿತ್ಸೆ ಪಡೆದುಕೊಳ್ಳಬೇಕು.

ಹಾವು ಕಚ್ಚಿದಾಗ ಹೆದರದೆಕಡಿತಕ್ಕೆ ಒಳಗಾದ ವ್ಯಕ್ತಿಯನ್ನು ಸಮಾಧಾನ ಪಡಿಸಿ ಹಾವು ಕಚ್ಚಿದದೇಹದ ಭಾಗದ ಪಾದರಕ್ಷೆ, ಕಾಲುಂಗುರ, ವಾಚ್‌ತೆಗೆದಿಡಬೇಕು. ಕಡಿತಕ್ಕೆ ಒಳಗಾದ ವ್ಯಕ್ತಿಯನ್ನು ಎಡಭಾಗಕ್ಕೆ ಮಲಗಿಸಿ ಕಚ್ಚಿದ ಭಾಗವನ್ನುಅಲುಗಾಡದಂತೆ ನೋಡಿಕೊಳ್ಳಬೇಕು. ಕಚ್ಚಿದ ಜಾಗಕ್ಕೆ ಬಟ್ಟೆಕಟ್ಟಬಾರದು. ಗಾಯವನ್ನು ಕೊಯಬಾರದು, ಬಾಯಿಂದ ವಿಷಯತೆಗೆಯಬಾರದುಎಂದರು.

ವೈದ್ಯಾಧಿಕಾರಿಡಾ.ತ್ಯಾಗರಾಜ, ಆರೋಗ್ಯ ಶಿಕ್ಷಣಾಧಿಕಾರಿಗೀತಮ್ಮ, ಚಂದ್ರಶೇಖರ, ಬಸವರಾಜ, ಬಸಪ್ಪ, ಆಶಾ ಕಾರ್ಯಕರ್ತೆಯರಾದ ನಾಗರತ್ನ, ಮಲ್ಲಮ್ಮ, ಮರಿಲಿಂಗಮ್ಮಇತರರಿದ್ದರು.

## ವಿಶ್ವ ಆತ್ಮಹತ್ಯೆ ತಡೆಗಟ್ಟುವಿಕೆ ಸಪ್ತಾಹ ಅಂಗವಾಗಿ ವಿದ್ಯಾರ್ಥಿಗಳಿಗೆ ಜಾಗೃತಿ ಶಿಬಿರ



**ಯುವ ಮಾರ್ಗ ಸುದ್ದಿ**

**ಮಾನ್ವಿ,ಸೆ.10**– ಪಟ್ಟಣದ ಸರ್ಕಾರಿ ಪದವಿ ಪೂರ್ವ ಬಾಲಕಿಯರ ಕಾಲೇಜಿನ ಸಭಾಂಗಣದಲ್ಲಿ ವಿಶ್ವ ಆತ್ಮಹತ್ಯೆ ತಡೆಗಟ್ಟುವಿಕೆ ಸಪ್ತಾಹ ಅಂಗವಾಗಿ ಮಾನ್ವಿ ಪಟ್ಟಣದ ಆರೋಗ್ಯ ಇಲಾಖೆಯ ನಮ್ಮ ಕ್ಲೀನಿಕ್ ವತಿಯಿಂದ ನಡೆದ ಆತ್ಮಹತ್ಯೆ ತಡೆಗಟ್ಟುವಿಕೆ ಕುರಿತು ವಿದ್ಯಾರ್ಥಿಗಳಲ್ಲಿ ಜಾಗೃತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ನಮ್ಮ ಕ್ಲೀನಿಕ್‌ನ ವೈದ್ಯಾಧಿಕಾರಿ ಡಾ. ಪ್ರಜ್ವಲ್ ಮಾತನಾಡಿ ವಿದ್ಯಾರ್ಥಿಗಳಲ್ಲಿ ಮೂಡುವ ನಕಾರಾತ್ಮಕ ಅಂಶಗಳು ಮನಸ್ಸಿನ ಮೇಲೆ ತೀವ್ರವಾದ ಪ್ರಭಾವವನ್ನು ಬೀರುತ್ತವೆ. ಅತ್ಮಹತ್ಯೆಗೆ ಪ್ರಚೋದನೆ ನೀಡುತ್ತವೆ. ಮಾನಸಿಕ ಖಿನತೆಯನ್ನು ಮೂಡಿಸುತ್ತವೆ ಅದ್ದರಿಂದ ವಿದ್ಯಾರ್ಥಿಗಳು ಸದಾ ತಮ್ಮ ಮನಸ್ಸನ್ನು ಸಕಾರಾತ್ಮಕ ವಿಷಯಗಳ ಕಡೆ ಗಮನವಿರುವಂತೆ ನೋಡಿಕೊಳ್ಳಬೇಕು. ಮಾನಸಿಕವಾಗಿ ಚೈತನ್ಯವನ್ನು ಸದಾ ಜಾಗೃತಗೊಳಿಸುವ ಜೀವನಶೈಲಿಯನ್ನು ರೂಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಯೋಗ ಗುರುಗಳಾದ ಅನ್ನದಾನಯ್ಯ ಸ್ವಾಮಿ ಮಾತನಾಡಿ ವಿದ್ಯಾರ್ಥಿಗಳು ಪ್ರತಿದಿನ ನಿಯಮಿತವಾಗಿ ಸ್ವಲ್ಪ ಸಮಯ ಸರಳವಾದ ಯೋಗ ಅಭ್ಯಾಸಗಳು, ಸೂರ್ಯನಾಮಸ್ಕಾರ, ಧ್ಯಾನ , ಪ್ರಾಣಾಯಾಮಗಳನ್ನು ನಿತ್ಯವೂ ಮಾಡುತ್ತಾ ಬಂದಲ್ಲಿ ದೈಹಿಕವಾಗಿ ಹಾಗೂ ಮಾನಸಿಕವಾಗಿ ಸಧೃಡರಾಗುವುದಕ್ಕೆ ಸಾಧ್ಯವಿದೆ ಹಾಗೂ ನಿಮ್ಮ ಮನಸ್ಸು ನಕಾರತ್ಮಕತೆಯಿಂದ ಸಕಾರಾತ್ಮಕವಾಗಿ ನಿಮ್ಮ ಮನಸ್ಸು ಬದಲಾಗಿ ಚೈತನ್ಯದಿಂದ ಕೂಡಿರುತ್ತದೆ ಎಂದು ತಿಳಿಸಿದರು.

ಕಾಲೇಜಿನ ವಿದ್ಯಾರ್ಥಿಗಳಿಗೆ ಸರಳವಾದ ಯೋಗದ ಆಸನಗಳ ಬಗ್ಗೆ ತಿಳಿಸಿಕೊಡಲಾಯಿತು.

ಕಾಲೇಜಿನ ಪ್ರಾಚಾರ್ಯರಾದ ನಾಗಮಲ್ಲೇಶ್ . ಮಾನ್ವಿ ನಮ್ಮ ಕ್ಲಿನಿಕ್ಕಿನ ಪ್ರಯೋಗ ಶಾಲಾ ತಜ್ಞರಾದ ಕೃಷ್ಣಮೂರ್ತಿ. ಉಪನ್ಯಾಸಕರಾದ ಅನುಪಮ. ಬಸವರಾಜ್. ಅಯ್ಯಪ್ಪ ಸೇರಿದಂತೆ ಕಾಲೇಜಿನ ವಿದ್ಯಾರ್ಥಿನಿಯರು ಭಾಗವಹಿಸಿದ್ದರು

## ಜಿಲ್ಲಾಮಟ್ಟದ ವಿಜ್ಞಾನ ವಿಚಾರ ಗೋಷ್ಠಿ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದ ಅದರ್ಶ ಶಾಲೆಯ ನವ್ಯಾ



**ಯುವ ಮಾರ್ಗ ಸುದ್ದಿ**

**ಮಾನ್ವಿ,ಸೆ.10**–ತಾಲೂಕಿನ ನೀರಮಾನ್ವಿ ಆದರ್ಶ ವಿದ್ಯಾಲಯ ಸರ್ಕಾರಿ ಆಂಗ್ಲ ಮಾಧ್ಯಮ ಶಾಲೆಯ ಹತ್ತನೇ ತರಗತಿಯ ವಿದ್ಯಾರ್ಥಿನಿ ನವ್ಯಾ ಶೇಖರಗೌಡ ಮಾಲಿಪಾಟೀಲ್ ನಕ್ಕುಂದಿ ಇವರು ರಾಯಚೂರಿನ ಯರಮರಸ್ ನಲ್ಲಿನ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಯಲ್ಲಿ ಪ್ರೌಢಶಾಲಾ ವಿದ್ಯಾರ್ಥಿಗಳಿಗಾಗಿ ಆಯೋಜಿಸಲಾಗಿದ್ದ ಕ್ವಾಂಟಮ್ ಯುಗದ ಆರಂಭ, ಸಾಮರ್ಥ್ಯಗಳು ಮತ್ತು ಸವಾಲುಗಳು ಕುರಿತು ನಡೆದ ವಿಜ್ಞಾನ ವಿಚಾರ ಗೋಷ್ಠಿ ಸ್ಪರ್ಧೆಯಲ್ಲಿ ಜಿಲ್ಲಾಮಟ್ಟದಲ್ಲಿ ಪ್ರಥಮ ಸ್ಥಾನ ಪಡೆದು ವಿಭಾಗಮಟ್ಟಕ್ಕೆ ಆಯ್ಕೆಯಾಗಿರುವುದಕ್ಕೆ ಹಾಗೂ ಮಾರ್ಗದರ್ಶನ ಮಾಡಿದ ಶಿಕ್ಷಕಿ ಪಲ್ಲವಿ ಯವರನ್ನು ತಾ.ಕ್ಷೇತ್ರ ಶಿಕ್ಷಣಾಧಿಕಾರಿ ಚಂದ್ರಶೇಖರ.ಡಿ ಹಾಗೂ ಅದರ್ಶ ಶಾಲೆಯ ಮುಖ್ಯಗುರುಗಳಾದ ದೇವಯ್ಯ ರವರು ಅಭಿನಂದಿಸಿದ್ದಾರೆ.

## ಇಂದು ಮಹಾನಗರ ಪಾಲಿಕೆಯಿಂದ ರಾಯಚೂರು ಮ್ಯಾರಥಾನ್

**ರಾಯಚೂರು,ಸೆ.10**–ಇಲ್ಲಿನ ರಾಯಚೂರು ಮಹಾನಗರ ಪಾಲಿಕೆಯಿಂದ ಯುವಜನತೆ ಮತ್ತು ನಾಗರಿಕರ ಸಕ್ರಿಯ ಪಾಲ್ಗೊಳ್ಳುವಿಕೆಯನ್ನು ಉತ್ತೇಜಿಸುವ ಉದ್ದೇಶದಿಂದ ಯೂತ್ ಫಾರ್ ಸಿಟಿ, ಸಿಟಿ ಫಾರ್ ಯೂತ್ ಎಂಬ ಶೀರ್ಷಿಕೆಯಡಿಯಲ್ಲಿ ಸೆಪ್ಟೆಂಬರ್ 11ರಂದು ಗುರುವಾರ ಬೆಳಗ್ಗೆ 6 ಗಂಟೆಗೆ ರಾಯಚೂರು ನಗರದಲ್ಲಿ ಮ್ಯಾರಥಾನ್ ಆಯೋಜಿಸಲಾಗಿದ್ದು, ನಗರದ ಯುವಜನಾಂಗ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಕೋರಲಾಗಿದೆ.

ಅಂದು ಬೆಳಗ್ಗೆ 6 ಗಂಟೆಯೊಳಗೆ ನಗರದ ಮಹಾತ್ಮಗಾಂಧಿ ಕ್ರೀಡಾಂಗಣದಲ್ಲಿ ಎಲ್ಲರೂ ಸೇರಿ ಬೆಳಗ್ಗೆ ಸರಿಯಾಗಿ 6 ಗಂಟೆಗೆ ಸ್ಟೇಡಿಯಂನಿಂದ ಆರಂಭವಾಗುವ ಮ್ಯಾರಾಥಾನ್ ಬಳಿಕ ನಗರದ ಅಂಬೇಡ್ಕರ್ ವೃತ್ತ, ಸ್ಟೇಷನ್ ವೃತ್ತದ ಮೂಲಕ ಮಂತ್ರಾಲಯ ರಸ್ತೆಯಲ್ಲಿನ ಅತಿಥಿ ಹೋಟೆಲ್‌ವರೆಗೆ ಸಾಗಿ, ಅಲ್ಲಿಂದ ಮರಳಿ ಸ್ಟೇಷನ್ ವೃತ್ತ, ಅಂಬೇಡ್ಕರ್ ವೃತ್ತದ ಮೂಲಕ ಮಹಾತ್ಮಗಾಂಧಿ ಕ್ರೀಡಾಂಗಣಕ್ಕೆ ಬಂದು ಮುಕ್ತಾಯವಾಗಲಿದೆ. ಈ ಮ್ಯಾರಥಾನ್‌ನಲ್ಲಿ 17 ರಿಂದ 35 ವರ್ಷದವರೆಗಿನ ಯುವಕರು ಮತ್ತು ಮಹಿಳೆಯರು ಭಾಗಿಯಾಗಬಹುದಾಗಿದೆ. ಈ ಮ್ಯಾರಾಥಾನ್‌ದಲ್ಲಿ ವಿಜೇತರಾದವರಿಗೆ ಪ್ರಥಮ ಬಹುಮಾನ 5000 ರೂ., ದ್ವಿತೀಯ ಬಹುಮಾನ 3500 ರೂ., ಹಾಗೂ ತೃತೀಯ ಬಹುಮಾನ 2500 ರೂ.ಗಳನ್ನು ನೀಡಲಾಗುದು ಎಂದು ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬೀನ್ ಮೊಹಾಪಾತ್ರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H